ಸಂಪುಟ 01 | ಸಂಚಿಕೆ 87 | ಗುರುವಾರ 12 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಡಾರ್ವಿನ್ ದಿನ**

1809 ರಲ್ಲಿ ವಿಕಾಸಾತ್ಮಕ ಜೀವಶಾಸ್ತ್ರದ ಪಿತಾಮಹ ಚಾರ್ಲ್ಸ್ ಡಾರ್ವಿನ್ ಅವರ ಜನ್ಮ ವಾರ್ಷಿಕೋತ್ಸವದ ಸ್ಮರಣಾಥ–ರ್ ಪ್ರತಿ ವರ್ಷ ಫೆಬ್ರವರಿ 12 ಅನ್ನು ಡಾರ್ವಿನ್ ದಿನವನ್ನಾಗಿ ಆಚರಿಸಲಾಗುತ್ತದೆ. ಈ ದಿನವು ವಿಕಾಸಾತ್ಮಕ ಮತ್ತು ಸಸ್ಯ ವಿಜ್ಞಾನಕ್ಕೆ ಡಾರ್ವಿನ್ ನೀಡಿದ ಕೊಡುಗೆಯನ್ನು ಎತ್ತಿ ತೋ–ರಿಸುತ್ತದೆ. 2015 ರಲ್ಲಿ, ಡಾರ್ವಿನ್ ಅವರ 'ಆರಿಜಿನ್ ಆಫ್ ಸ್ಪೀಷೀಸ್' ಅನ್ನು ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ಶೈಕ್ಷಣಿಕ ಪುಸ್ತಕವೆಂದು ಆಯ್ಕೆ ಮಾಡಲಾಯಿತು

**2) ರಾಷ್ಟ್ರೀಯ ಉತ್ಪಾದಕತಾ ದಿನ**

ಭಾರತದಲ್ಲಿ ಉತ್ಪಾದಕತಾ ಸಂಸ್ಕೃತಿಯನ್ನು ಹೆಚ್ಚಿಸಲು ವಾರ್ಷಿಕವಾಗಿ ಫೆಬ್ರವರಿ 12 ರಂದು ಇದನ್ನು ಆಚರಿಸಲಾಗುತ್ತದೆ. ಇದನ್ನು ರಾಷ್ಟ್ರೀಯ ಉತ್ಪಾದಕತಾ ಮಂಡಳಿ (NPC) ಒಂದು ಥೀಮ್‌ನೊಂದಿಗೆ ಆಚರಿಸುತ್ತದೆ.

## ಸುಭಾಷಿತ

ನಮಗೆ ಅಗತ್ಯ ಇದ್ದಷ್ಟನ್ನು ಮಾತ್ರ ತಿಳಿದುಕೊಂಡು,
ಮಿಕ್ಕಿದ್ದನ್ನು ನೋಡಿ ಅಚ್ಚರಿಪಡುತ್ತಾ
ಇದ್ದುಬಿಡುವುದು ಒಳ್ಳೆಯದು.

–ಕೆ.ಪಿ.ಪೂರ್ಣಚಂದ್ರ ತೇಜಸ್ವಿ

## ಐತಿಹಾಸಿಕ ಕಂಪ್ಲಿ ಉತ್ಸವ ಆರಂಭ

❑ ನೈಜ್ಯ ದೆಸೆ ನ್ಯೂಸ್

ವಿಜಯನಗರ ಸಾಮ್ರಾಜ್ಯದ ಹೆಬ್ಬಾಗಿಲು ಎನ್ನುವ ಪ್ರತೀತಿ ಹೊಂದಿರುವ ಐತಿಹಾಸಿಕ ಕಂಪ್ಲಿ ಉತ್ಸವಕ್ಕೆ ಕ್ಷಣಗಣನೆ ಆರಂಭಗೊಂಡಿದೆ. ಕುಮಾರ ರಾಮನ ನಾಡಿನಲ್ಲಿ ಎರಡನೇ ಬಾರಿಗೆ ಕಂಪ್ಲಿ ಉತ್ಸವದ ಸಿದ್ಧತೆಗಳು ಗರಿಗೆದರಿದ್ದು, ಕಂಪ್ಲಿ ನಗರದುದ್ದಕ್ಕೂ ವಿದ್ಯುತ್ ದೀಪಗಳ ಅಲಂಕಾರ ನೋಡುಗರ ಗಮನ ಸೆಳೆಯುವ ಜೊತೆಗೆ ಕಂಪ್ಲಿ ಉತ್ಸವಕ್ಕೆ ಮೆರಗು ನೀಡಿದೆ.



ಪ್ರಾಚೀನ ಕಾಲದಲ್ಲಿ ಹಂಪಿ ಸ್ಥಾಪನೆಗೆ ಸ್ಫೂರ್ತಿಯಾಗಿದ್ದ ಕಂಪ್ಲಿಯು ಮೊದಲಿಗೆ ತಾಲೂಕು ಕೇಂದ್ರವಾಗಿತ್ತು. ನಂತರ ಹೊಸಪೇಟೆಯ ತಾಲೂಕು ವ್ಯಾಪ್ತಿಯಲ್ಲಿ ಕಂಪ್ಲಿ ಪಟ್ಟಣವಾಗಿ–ತ್ತು. ಆದರೆ, ಈಗ ಮತ್ತೆ ಕಂಪ್ಲಿ ತಾಲೂಕು ಕೇಂದ್ರವಾಗಿ ಮಾರ್ಪಟ್ಟಿದೆ.

# ವಂದೇ ಮಾತರಂ ಗೀತೆಗೆ ರಾಷ್ಟ್ರಗೀತೆ ಸ್ಥಾನಮಾನ ನೀಡಿರುವುದನ್ನು ಸ್ವಾಗತಿಸುತ್ತೇವೆ :ಎನ್.ರವಿಕುಮಾರ್

**ಬೆಂಗಳೂರು: ಕೇಂದ್ರ ಸರ್ಕಾರ ವಂದೇ ಮಾತರಂ ಗೀತೆಗೆ ರಾಷ್ಟ್ರಗೀತೆಯ ಸ್ಥಾನಮಾನ ಕೊಟ್ಟಿದೆ. ಬಿಜೆಪಿ ತುಂಬು ಹೃದಯದಿಂದ ಅದನ್ನು ಸ್ವಾಗತಿಸುತ್ತದೆ ಎಂದು ವಿಧಾನಪ–ರಿಷತ್ ಸದಸ್ಯ ಎನ್.ರವಿಕುಮಾರ್ ಹೇಳಿದ್ದಾರೆ.**

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ವಂದೇ ಮಾತರಂ ಗೀತೆಗೆ ರಾಷ್ಟ್ರಗೀತೆಯ ಸ್ಥಾನಮಾನ ಕೊಟ್ಟಿದೆ. ಬಿಜೆಪಿ ತುಂಬು ಹೃದಯದಿಂದ ಅದನ್ನು ಸ್ವಾಗತಿಸುತ್ತದೆ. ಸ್ವಾತಂತ್ರ್ಯ ಹೋರಾಟದ ಕಿಚ್ಚು ಹೆಚ್ಚಿಸಿದ್ದ ಗೀತೆ, ಬಂಗಾಳದ ಹೋರಾಟದ ರಣಗೀತೆಯಾಗಿತ್ತು ಎಂದು ಹೇಳಿದರು. ವಂದೇ ಮಾತರಂ ಗೀತೆ ರಚನೆ ಮಾಡಿದ್ದು ಬಂಕಿಮ್ ಚಂದ್ರ ಚಟರ್ಜಿ ಅವರು. 1896ರಲ್ಲಿ ಮಹಾನ್ ಸಾಹಿತಿ ರವೀಂದ್ರನಾಥ ಠಾಗೂರ್ ಗೀತೆ ಹಾಡಿದರು. ಕ್ರಾಂತಿ ಗೀತೆಯಾಗಿ–ತ್ತು ವಂದೇ ಮಾತರಂ. ದೇಶದ ಐಕ್ಯತೆ, ಸ್ವಾತಂತ್ರ್ಯ ತಂದು ಕೊಟ್ಟಿದ್ದು, ಯುವಕರಲ್ಲಿ ಸ್ಫೂರ್ತಿ ನಿಡೀದ್ದು ವಂದೇ ಮಾತರಂ. ಹಾಗಾಗಿ ಕೇಂದ್ರ ಸರ್ಕಾರ ರಾಷ್ಟ್ರ ಗೀತೆಗೆ ಸರಿಸಮಾನವಾಗಿ ಗೌರವ ಕೊಡಬೇಕೆಂದು



ಈ ಆದೇಶ ಮಾಡಿದೆ ಎಂದರು.

ಸಚಿವ ಬೈರತಿ ಸುರೇಶ್ ಕಚೇ–ರಿಯಲ್ಲಿ ಚಿನ್ನ ಮತ್ತು ಹಣ ಕಳವು ವಿಚಾರದ ಕುರಿತು ಮಾತನಾಡಿದ ಅವರು, ವಿಧಾನಸೌಧದಲ್ಲಿ 300 ಗ್ರಾಂ ಚಿನ್ನ ಸಿಕ್ಕಿದೆ. ಇಷ್ಟು ದೊಡ್ಡ ಪ್ರಮಾಣದ ಚಿನ್ನ ಹೇಗೆ ಸಿಕಿತು? ಯಾರಿಗೆ ಕೊಡಲು ಬಂದಿದ್ದರು? ಹಣವನ್ನು ಕೊಡುವ ಬದಲು, ಚಿನ್ನ ಕೊಡಲು ಬಂದಿದ್ದರಾ? ಎಂದು ಪ್ರಶ್ನಿಸಿದರು. ಹಣದ ಬದಲು ಚಿನ್ನದ ಮೂಲಕ ಲಂಚ ಪಡೆಯುವಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಬೈರತಿ ಸುರೇಶ್ ಇರಲಿ, ಯಾರೇ ಇರಲಿ ತನಿಖೆ ಆಗಬೇಕು. ಇದರಲ್ಲಿ ಸಿಲುಕಿದ ಸಚಿವರು ರಾಜೀನಾಮೆ ಕೊಡಬೇಕು. ಇದು ಭ್ರಷ್ಟಾಚಾರದ ಮತ್ತೊಂದು ಮುಖವಾಗಿದೆ. ಕರ್ನಾಟಕ ಸರ್ಕಾರ ಭ್ರಷ್ಟಾಚಾರದಲ್ಲಿ ಸಿಲುಕಿರುವ ಮತ್ತೊಂದು ಉದಾಹರಣೆ ಎಂದರು.

ಕಾಂಗ್ರೆಸ್ ಶಾಸಕರ ವಿದೇಶ ಪ್ರವಾಸಕ್ಕೆ ಪ್ರತಿಕ್ರಿಯಿಸಿ, ಸಿಎಂ ಕಡೆಯವರು ಯಾರ ಜೊತೆ ಯಾವ ದೇಶಕ್ಕೆ, ಡಿಕೆಶಿ ಕಡೆಯವರು ಯಾವ ಕಡೆ ಪ್ರವಾಸ ಹೋಗುತ್ತಿದ್ದಾರೆ ಗೊತ್ತಿಲ್ಲ ಎಂದು ಹೇಳಿದರು. ಬಜೆಟ್ ಅಧಿವೇಶನ ಮೊದಲು ಮತ್ತು ನಂತರ ಏನಾದರೂ ಆಗಬಹುದು. ರಾಜ್ಯದಲ್ಲಿ ಖಜಾನೆ ಖಾಲಿಯಾಗಿದೆ. ಭ್ರಷ್ಟಾಚಾರ ತಾಂಡವವಾಡುತ್ತಿದೆ. ಕರ್ನಾಟಕ ರಾಜ್ಯಕ್ಕೆ ಇದೇನು ಮರ್ಯಾದೆ ತಂದು ಕೊಡುತ್ತಿಲ್ಲ ಎಂದರು. ಮಧ್ಯದ ಲೈಸೆನ್?ಸ ಶಾಸಕರಿಗೆ ಕೊಡುವುದನ್ನು ಮಾಡುತ್ತಿದ್ದಾರೆ. ಸಿಎಲ್–7 ಲೈಸೆನ್?ಸ ಶಾಸಕರಿಗೆ ಕೊಡುವುದು, ವಿದೇಶಿ ಪ್ರವಾಸ ಕರೆದುಕೊಂಡು ಹೋಗುವುದು ನಡೆಯುತ್ತಿದೆ. ಇದೆಲ್ಲಾ ಅಧ:ಪತನದತ್ತ ಕರೆದುಕೊಂಡು ಹೋಗುತ್ತಿದೆ. ಜನ ಬೇಸತ್ತು ಹೋಗಿದ್ದಾರೆ. ಜನ ಬೆಲೆ ಏರಿಕೆಯಿಂದ ರೋಸಿಹೋಗಿದ್ದಾರೆ ಎಂದು ಅವರು ಕಿಡಿಕಾರಿದರು.

# 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಫೆ.28 ಕೊನೆಯ ದಿನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ದಿನಾಂಕವನ್ನು ಫೆ.28ರವರೆಗೆ ವಿಸ್ತರಿಸಲಾಗಿದೆ.**

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡ ರಸ್ತೆ),




ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು: Web-site:https://sevasindhuser-vices.karnataka.gov.in ನಲ್ಲಿ ಫೆ.28ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990, 08022535902 ರಾಯಚೂರು: 8496098631, 9731028420, 9731341815, 9686853719, 6361866571, 9108175899, 9902906266 ಮಾನವಿ, ಸಿರವಾರ: 7411771075, 886733478, ದೇವದುರ್ಗ: 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306, 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಯ್ಕೋಡಿ ದಂಪತಿಗಳಿಗೆ ಸಂಸ್ಥೆಯಿಂದ ಗೌರವ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬಳಗಾನೂರ ಕ್ರಾಸ್ ನಲ್ಲಿರುವ ಕುವೆಂಪು ಗ್ರಾಮೀಣ ಅಭಿವೃದ್ಧಿ ಸಂಸ್ಥೆ(ರಿ) ಇದರ ಅಧ್ಯಕ್ಷರಾದ ಬಸವರಾಜ್ ಎನ್.ನಾಯ್ಕೋಡಿ ಹಾಗೂ ಅವರ ಧರ್ಮಪತ್ನಿ ಶಾರದಾ ಬಿ ನಾಯ್ಕೋಡಿ ಇವರನ್ನು ಶೈಕ್ಷಣಿಕ ಸೇವೆಗಾಗಿ ವೇದಿಕೆಯ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು.**

ಕಕ್ಕೇರಾ ಭಾವೈಕ್ಯತಾ ಶಿಶುನಾಳ ಶರೀಫ ಮಠದ ಸಂತ ಶ್ರೀ ಶರೀಫ ಶಿವಯೋಗಿಗಳು ಹಾಗೂ ಬಳಗಾನೂರದ ಮಾತೃಶ್ರೀ ಮಂಜುಳಾ ಅಮ್ಮನವರು ಸಾನಿಧ್ಯ ವಹಿಸಿದ್ದರು. ಗಣ್ಯರಾದ ನಿಂಗನಗೌಡ



ಪಾಟೀಲ(ಬಳಗಾನೂರ),ಕಾಶಿನಾಥ ತಿ. ಸಜ್ಜನ, ಮಂದಾಕಿನಿ ಷಣ್ಮುಖಪ್ಪ ಅಮ್ಮನವರು, ಉಪಾಧ್ಯಕ್ಷ ಮಧು ಬಿ.ನಾಯ್ಕೋಡಿ, ಪ್ರಧಾನ ಕಾರ್ಯದರ್ಶಿ ಮನು ಬಿ. ನಾಯ್ಕೋಡಿ, ಉಪನ್ಯಾಸಕ ಎಚ್.ವಿ.ಬಾಗೇವಾಡಿ ನಿವೃತ್ತ ಶಿಕ್ಷಕ ಎಂ.ಎಸ್.ಹುಲ್ಲೂರ, ಪ್ರಾಚಾರ್ಯ ಸವಿತಾ ಎಂ.ಕಾಗಿ, ಜಯಶ್ರೀ ಎಂ.ಕಾಗಿ, ಆಡಳಿತ ಮಂಡಳಿ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ಪಶುಪಾಲನಾ ಮತ್ತು ಪಶುವೈದ್ಯಕಿಯ ಸೇವಾ ಇಲಾಖೆ ವತಿಯಿಂದ ತಾಂತ್ರಿಕ ಕಾರ್ಯಾಗಾರ

❑ ನೈಜ್ಯ ದೆಸೆ ನ್ಯೂಸ್

**ಪ್ರಾಣಿಗಳ ಬಗ್ಗೆ ದಯೆ ತೋರುವುದು ಮಾನವೀಯತೆಯ ಲಕ್ಷಣ. ಪ್ರಾಣಿ ಸಂರಕ್ಷಣೆ ಕು–ರಿತಂತೆ ಸುಪ್ರೀಂ ಕೋರ್ಟ್ ನೀಡಿರುವ ಆದೇಶವನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ತಿಳಿಸಿದರು.ಪಶುಪಾಲನಾ ಮತ್ತು ಪಶುವೈದ್ಯಕಿಯ ಸೇವಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ತಾಂತ್ರಿಕ ಕಾರ್ಯಾಗಾರದಲ್ಲಿ ಮಾತನಾಡಿದರು.**

ಪ್ರಾಣಿ ಕಲ್ಯಾಣವು ಕೇವಲ ಪ್ರಾಣಿಗಳ ರಕ್ಷಣೆಗಷ್ಟೇ ಸೀಮಿತವಲ್ಲ, ಅದು ಸಾರ್ವಜನಿಕ ಆರೋಗ್ಯ, ಪರಿಸರ ಸಂರಕ್ಷಣೆ ಮತ್ತು ಗ್ರಾಮೀಣ ಆರ್ಥಿಕತೆಯೊಂದಿಗೆ ನೇರವಾಗಿ ಸಂಬಂಧಿಸಿದೆ. ಪ್ರಾಣಿಗಳ ಮೇಲೆ ಹಿಂಸೆ ತಡೆಯುವುದು ಹಾಗೂ ಅವುಗಳಿಗೆ ಸೂಕ್ತ ಆಶ್ರಯ, ಆಹಾರ ಮತ್ತು ಚಿಕಿತ್ಸೆಯನ್ನು ಒದಗಿಸುವುದು ನಮ್ಮ ಸಮಾಜದ




ಜವಾಬ್ದಾರಿಯಾಗಿದೆ. ಜಿಲ್ಲೆಯಲ್ಲಿ ಬೀದಿ ನಾಯಿಗಳ ಜನಸಂಖ್ಯೆ ನಿಯಂತ್ರಣ, ನಿಯಮಿತ ಲಸಿಕಾ ಕಾರ್ಯಕ್ರಮ, ರೇಬೀಸ್ ತಡೆ ಹಾಗೂ ಪಶು ವೈದ್ಯಕಿಯ ಶಿಬಿರಗಳನ್ನು ಸಮನ್ವಯದೊಂದಿಗೆ ನಡೆಸುವ ಅಗತ್ಯವಿದೆ ಎಂದರು. ಪಶುಪಾಲನಾ ಇಲಾಖೆಯ ಜಂಟಿ ನಿರ್ದೇಶಕ ಡಾ. ರಮೇಶ ದೊಡ್ಡಮನಿ ಮಾತನಾಡಿ, ವೈದ್ಯರು ಈ ತಾಂತ್ರಿಕ ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಪ್ರಾಣಿಗಳಿಗೆ ಹಿಂಸೆಯಾಗದಂತೆ ವೈಜ್ಞಾನಿಕವಾಗಿ ಚಿಕಿತ್ಸೆ ಮತ್ತು ಲಸಿಕೆ ನೀಡಬೇಕು ಎಂದರು.

ಪ್ರಶಂಸೆ ಪತ್ರ ವಿತರಣೆ ಬೀದಿ ನಾಯಿಗಳ ನಿಯಂತ್ರಣದ ಕುರಿತು ಸುಪ್ರಿಂ ಸೂಚನೆಯಂತೆ ಕಾರ್ಯನಿರ್ವಹಿಸಿ ಶೇ. 100ರಷ್ಟು ಪ್ರಗತಿ ಸಾಧಿಸಿರುವುದಕ್ಕಾಗಿ ಯಲಬುರ್ಗಾ ಮತ್ತು ಕುಕನೂರು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ನಾಗೇಶ ಹಾಗೂ ಕಾರಟಗಿ ಪುರಸಭೆಯ ಮುಖ್ಯಾಧಿಕಾರಿ ಸಾಬಣ್ಣ ಕಟ್ಟೇಕಾರ ಅವರಿಗೆ ಕಾರ್ಯಾಗಾರದಲ್ಲಿ ಪ್ರಶಂಸಾ ಪತ್ರ ವಿತರನೆ ಮಾಡಲಾಯಿತು. ಕೊಪ್ಪಳ ಡಿಎಫ್‌ಓ ಕೆ. ನಿರ್ಮಲಾ, ವಿಷಯ ತಜ್ಞರಾದ ಬೀದರ ಪಶುವೈದ್ಯಕಿಯ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ. ವಿವೇಕ ಕಸರಳಿಕರ, ಶಿವಮೊಗ್ಗ ಪಶುವೈದ್ಯಕಿಂ–ಯ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ. ಎನ್.ಬಿ. ಶ್ರೀಧರ, ಹ್ಯೂಮೇನ್ ವರ್ಲ್ಡ್ ಫಾರ್ ಇಂಡಿಂ–ಯಾ ಫೌಂಡೇಶನ್ ಹಿರಿಯ ತಜ್ಞ ರಮೇಶ ಭಜಂತ್ರಿ, ಪಶುಪಾಲನಾ ಮತ್ತು ಪಶುವೈದ್ಯಕಿಂ–ಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ.ಮಲ್ಲಯ್ಯ, ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ಶರಣಬಸಪ್ಪ ರೋಣ ಇತರರಿದ್ದರು.

# ಸನ್ ರೈಸ್ ಕಾಲೇಜಿನಲ್ಲಿ ವಿಶ್ವ ಯುನಾನಿ ದಿನ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಫೆ 11 ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು, ಜಿಲ್ಲಾ ಆಯುಷ್ ಇಲಾಖೆ ರಾಯಚೂರು, ತಾಲೂಕ ಯುನಾನಿ ಆಸ್ಪತ್ರೆ ಸಿಂಧನೂರು ಹಾಗೂ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಯುನಾನಿ ದಿನವನ್ನು ಭಾನುವಾರ ಸಿಂಧನೂ–ರಿನಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.**

ಕಾರ್ಯಕ್ರಮವನ್ನು ಯುನಾನಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಾದ ಡಾ. ಅಮ್ಜದ್ ಷ–ರೀಫ್ ಅವರು ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು. ವಿಶ್ವ ಯುನಾನಿ ದಿನವನ್ನು ಪ್ರತಿವರ್ಷ ಫೆಬ್ರವರಿ 11ರಂದು ಆಚ–ರಿಸಲಾಗುತ್ತದೆ. ಯುನಾನಿ ವೈದ್ಯಕೀಯ ಪದ್ಧತಿಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು, ಅದರ



ವೈಜ್ಞಾನಿಕ ಮೌಲ್ಯವನ್ನು ಪರಿಚಯಿಸುವುದು ಹಾಗೂ ಆಯುಷ್ ಪದ್ಧತಿಗಳ ಮಹತ್ವವನ್ನು ಎತ್ತಿ ತೋರಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಈ ದಿನವನ್ನು ಪ್ರಸಿದ್ಧ ಯುನಾನಿ ವೈದ್ಯ ಹಾಗೂ



ಸ್ವಾತಂತ್ರ್ಯ ಹೋರಾಟಗಾರರಾದ ಹಕೀಮ್ ಅಜ್ಮಲ್ ಖಾನ್ ಅವರ ಜನ್ಮದಿನದ ಸ್ಮರಣಾಥ–ರ್ವಾಗಿ ಆಚರಿಸಲಾಗುತ್ತದೆ. ಅವರು ಭಾರತದಲ್ಲಿ ಯುನಾನಿ ಪದ್ಧತಿಯನ್ನು ಸಂಘಟಿತವಾಗಿ ಬೆಳೆಸಿದ ಪ್ರಮುಖ ವ್ಯಕ್ತಿಯಾಗಿದ್ದಾರೆ...ಯುನಾನಿ ಚಿಕಿತ್ಸಾ ಪದ್ಧತಿ ಶತಮಾನಗಳಿಂದ ಜನರ ಆರೋಗ್ಯ ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸಿಕೊಂಡು ಬಂದಿದ್ದು, ಇದು ಪ್ರಕೃತಿ ಆಧಾರಿತ ಹಾಗೂ?ಪ–ರಿಣಾಮರಹಿತ ಚಿಕಿತ್ಸೆಯಾಗಿದೆ ಎಂದು ಹೇಳಿದರು.

ಇಂದಿನ ಯಾಂತ್ರಿಕ ಯುಗದಲ್ಲಿ ಮಾನಸಿಕ ಒತ್ತಡ, ಜೀವನಶೈಲಿ ಸಂಬಂಧಿತ ರೋಗಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಯುನಾನಿ ಪದ್ಧತಿಯ ಮಹತ್ವ ಇನ್ನಷ್ಟು ಹೆಚ್ಚಾಗಿದೆ. ಜನರು ಆಯುಷ್ ಪದ್ಧತಿಗಳ ಬಗ್ಗೆ ಹೆಚ್ಚಿನ ಅರಿವು ಹೊಂದಿ, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕೆಂದು ಅವರು ಸಲಹೆ ನೀಡಿದರು.ಯುನಾನಿ ಪದ್ಧತಿ ದೇಹದಲ್ಲಿರುವ ನಾಲ್ಕು ದ್ರವಗಳ (Humours) ಸಮತೋಲನದ ಮೇಲೆ ಆಧಾರಿತವಾಗಿದೆ: ರಕ್ತ ,ಶ್ಲೇಷ್ಮ ,ಪಿತ್ತ, ಕಪ್ಪು, ಪಿತ್ತ ಈ ದ್ರವಗಳ ಸಮತೋಲನವೇ ಆರೋಗ್ಯದ ಮೂಲ ಎಂದು ಯುನಾನಿ ಶಾಸ್ತ್ರ ಹೇಳುತ್ತದೆ. ಈ ಕಾರ್ಯಕ್ರಮದಲ್ಲಿ ಯುನಾನಿ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ ಅಮ್ಜದ್ ಶರೀಫ್ , ಸನ್ ರೈಸ್ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಗೆಳೆಯನೆಂದರೆ ನೆರಳಿನಂತೆ,
ಬಿಸಿಲಲ್ಲಿ ತಂಪು ನೀಡುವವನು.
ಕಷ್ಟದಲ್ಲಿ ಕೈ ಹಿಡಿದು,
ನಗುವಿನಲ್ಲಿ ಜೀವ ತುಂಬುವವನು.
ದುಃಖದ ಹೊತ್ತಿನಲ್ಲಿ ಧೈರ್ಯವಾಗಿ,
ಸಂತೋಷದಲ್ಲಿ ಜೊತೆಯಾಗಿ,
ಜೀವನ ಪಯಣದಲ್ಲಿ ಸದಾ,
ನನ್ನ ಜೊತೆ ನಡೆಯುವವನು.

ಹೃದಯದಿಂದ ಹೃದಯಕ್ಕೆ ಸೇರುವ,
ಅದೃಶ್ಯ ಸೇತುವೆ ಸ್ನೇಹ.
ಮೌನದಲ್ಲೂ ಅರ್ಥವಾಗುವ,
ಅಮೂಲ್ಯ ಸಂಬಂಧ ಸ್ನೇಹ.
ಹಣಕ್ಕಿಂತ ಮಿಗಿಲು,
ಹೆಸರಿಗೆ ಮೀರಿ ಬೆಲೆ,
ನಿಜವಾದ ಗೆಳೆಯ ಎಂದರೆ,
ದೇವರ ಕೊಡುಗೆಲೇ.

ನನ್ನ ನಗುವಿನ ಹಿಂದೆ ಇರುವ,
ನನ್ನ ಕಣ್ಣೀರನ್ನು ಅರಿಯುವ,
ನನ್ನ ತಪ್ಪು ತಿದ್ದುವವನು,
ಅವನೇ ನನ್ನ ಗೆಳೆಯ.
ಜಗತ್ತು ದೂರ ಸರಿದರೂ,
ಅವನು ಹತ್ತಿರವೇ ಇರುತ್ತಾನೆ,
ಸ್ನೇಹದ ಬೆಳಕಿನಿಂದ,
ನನ್ನ ಬದುಕು ಬೆಳಗಿಸುತ್ತಾನೆ.

ಯಾಸೀನ್ ಇರ್ಫಾನ್ ಸಿಂಧನೂರು

## ಸಾವಿನಲ್ಲೂ ಸಾರ್ಥಕತೆ ಮೆರೆದ ಕಾರುಣ್ಯಾಶ್ರಮದ ಶರಣ ಶ್ರೀ ಬಾಲಪ್ಪ

### ಕಾರುಣ್ಯಾಶ್ರಮದ ಆಶ್ರಯದಾತ ಶರಣ ಬಾಲಪ್ಪ ಅವರಿಂದ ದೇಹ ದಾನ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂಧ್ಯ ಆಶ್ರಮದಲ್ಲಿ ಸುಮಾರು ಎರಡು ವರ್ಷಗಳಿಂದ ಆಶ್ರಯ ಪಡೆದಿದ್ದ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಬೊಮ್ಮನಾಳ ಗ್ರಾಮದ ಜಗಜ್ಯೋತಿ ಬಸವಣ್ಣನವರ ಅನುಯಾಯಿಗಳಾದ ಶರಣ ಶ್ರೀ ಬಾಲಪ್ಪ ವಯಸ್ಸು -88 ಇವರು ಸಿಂಧನೂ-ರಿನ ತಾಲೂಕ ಸಾರ್ವಜನಿಕ ಆಸ್ಪತ್ರೆಯಲ್ಲಿ ನಿಧನರಾದ ಹಿನ್ನೆಲೆಯಲ್ಲಿ ಸಿಂಧನೂರು ನಗರದ ಬಸವ ಬಳಗ ಹಾಗೂ ಬಸವಪರ ಸಂಘಟನೆಗಳ ಶರಣರ ಸಮಕ್ಷಮದಲ್ಲಿ ರಾಯಚೂರು ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗೆ ನೇತ್ರದಾನ ದೇಹ ದಾನ ಮಾಡಲಾಯಿತು.**



ಈ ಸಮಯದಲ್ಲಿ ಶರಣ ಶ್ರೀ ಬಸವರಾಜ ಪಗಡದಿನ್ನಿ ಕುರುಕುಂದಾ ಇಂದು ನಮ್ಮನ್ನೆಲ್ಲಾ ಅಗಲಿದ ಶರಣ ಬಾಲಪ್ಪನವರ ಆಶಯದಂತೆ ನೇತ್ರದಾನ ದೇಹ ದಾನ ಮಾಡಲಾಗಿದೆ. ಬಸವ ಅನುಯಾಯಿಗಳು ಪರೋಪಕಾರಿಗಳಾಗಿ ಇಂತಹ ಸಾಮಾಜಿಕ ಕಾರ್ಯವನ್ನು ಮಾಡುತ್ತಿರುತ್ತಾರೆ. ಮತ್ತು ನಮ್ಮ ಸಿಂಧನೂರಿನ ಕಾರುಣ್ಯಾಶ್ರಮವು ಬಸವಣ್ಣನವರ ಆದರ್ಶದಂತೆ ಕಾರ್ಯನಿರ್ವಹಿಸುತ್ತಿರುವುದು ಸಿಂಧನೂರಲ್ಲದೆ ನಾಡಿನ ಸಮಸ್ತ ಬಸವಾದಿ ಶರಣರ ಪ್ರೀತಿಗೆ ಪಾತ್ರವಾಗಿದೆ.

ಸುಮಾರು ಎರಡು ವರ್ಷಗಳ ಕಾಲ ಇಂದು ಅಗಲಿದ ಶರಣ ಬಾಲಪ್ಪನವರ ಸೇವೆ ಮಾಡಿರುವ ಕಾರುಣ್ಯ ಕುಟುಂಬಕ್ಕೆ ಇನ್ನು ಹೆಚ್ಚಿನ ಸಾಮಾಜಿಕ ಸೇವೆ ಮಾಡುವಂತಹ ಶಕ್ತಿಯನ್ನು ನಾಡಿನ ಬಸವಾದಿ ಶರಣರು ಹರ ಗುರು ಚರಮೂರ್ತಿಗಳು ಕರುಣಿಸಲಿ ಎನ್ನುವ ವಿಶೇಷವಾದ ಪ್ರಾರ್ಥನೆ ನಮ್ಮೆಲ್ಲರದ್ದು. ಶರಣ ಬಾಲಪ್ಪನವರ ನೇತ್ರಗಳು ಇನ್ನೊಬ್ಬರ ಬಾಳಿಗೆ ಬೆಳಕಾಗಲಿ ಮತ್ತು ಅವರ ದೇಹ ವೈದ್ಯಕೀಯ ಶಿಕ್ಷಣಕ್ಕೆ ಮೆರುಗು ತರಲಿ ಎನ್ನುವ ಉದ್ದೇಶದಿಂದ ಸಿಂಧನೂರಿನ ಬಸವಪರ ಸಂಘಟನೆಗಳ ಮತ್ತು ಕಾರುಣ್ಯಾಶ್ರಮದ ಪದಾಧಿಕಾರಿಗಳ ಸಮಕ್ಷಮದಲ್ಲಿ ನೇತ್ರದಾನ ದೇಹ ದಾನ ಮಾಡಲಾಗಿದೆ. ಇವರ ಆತ್ಮಕ್ಕೆ ಶಾಂತಿ ಸಿಗಲಿ ಎನ್ನುವ ಪ್ರಾರ್ಥನೆಯ ಮೂಲಕ ಶರಣರನ್ನು ಬಿಳ್ಕೊಡಲಾಗುವುದು ಎಂದು ಭಾವನಾತ್ಮಕವಾಗಿ ಮಾತನಾಡಿ ಹಲವಾರು ಬಸವಣ್ಣನವರ ವಚನಗಳನ್ನು ಪಠಿಸಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಈ ಸಮಯದಲ್ಲಿ ಶರಣ ರಮೇಶ ಬೊಮ್ಮನಾಳ. ಶರಣ ತಿಪ್ಪಣ್ಣ ಶಿಕ್ಷಕರು.ಸುಭಾಸ್ ನಿವೃತ್ತ ಶಿಕ್ಷಕರು ವೆಂಕಟ ಸ್ವಾಮಿ ನಾರಿನಾಳ ವೆಂಕಟೇಶ ಈಳಿಗೇರು ವಕೀಲರು ಕುಷ್ಟಗಿ.. ಕೆ. ಶರಣಪ್ಪ ತೆಂಗಿನಕಾಯಿ ಅಧ್ಯಕ್ಷರು ಬಸವ ಚಾರಿಟೇಬಲ್ ಟ್ರಸ್ಟ್. ಕರೇಗೌಡ ಕುರುಕುಂದಾ ಅಧ್ಯಕ್ಷರು ಬಸವ ಕೇಂದ್ರ ಸಿಂಧನೂರು. ಬಸವಲಿಂಗಪ್ಪ ಬಾದರ್ಲಿ. ಚಂದ್ರೇಗೌಡ ಹರೇಟನೂರು. ಅಮರೇಶ ಗುರಿಕಾರ. ಶಾಂತಪ್ಪ ಚಿಂಚರಿಕಿ. ವೀರನಗೌಡ ಬಸಾಪುರ. ಚಾಂದ್ ಸಾಬ್. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ರಾಯಚೂರು ರಿಮ್ಸ್ ಮೆಡಿಕಲ್ ಕಾಲೇಜ್ ಸಿಬ್ಬಂದಿಗಳಾದ ಜಬಿವುಲ್ಲಾ. ಶ್ರೀಮಠ ಸೇವಾ ಟ್ರಸ್ಟ್ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ ಸಿದ್ದಯ್ಯ ಸ್ವಾಮಿ ಮರಿಯಪ್ಪ ಜ್ಯೋತಿ. ಹಾಗೂ ಸಿಂಧನೂರ್ನ ಬಸವಪರ ಸಂಘಟನೆಗಳ ಹಲವಾರು ಶರಣರು ಉಪಸ್ಥಿತರಿದ್ದರು.

## ಪಶುಪಾಲನಾ ಮತ್ತು ಪಶುವೈದ್ಯಕಿಯ ಸೇವಾ ಇಲಾಖೆ ವತಿಯಿಂದ ತಾಂತ್ರಿಕ ಕಾರ್ಯಾಗಾರ

ನೈಜ್ಯ ದೆಸೆ ನ್ಯೂಸ್

**ಪ್ರಾಣಿಗಳ ಬಗ್ಗೆ ದಯೆ ತೋರುವುದು ಮಾನವೀಯತೆಯ ಲಕ್ಷಣ. ಪ್ರಾಣಿ ಸಂರಕ್ಷಣೆ ಕುರಿತಂತೆ ಸುಪ್ರೀಂ ಕೋರ್ಟ್ ನೀಡಿರುವ ಆದೇಶವನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ತಿಳಿಸಿದರು.**



ಪಶುಪಾಲನಾ ಮತ್ತು ಪಶುವೈದ್ಯಕಿಂ-ಯ ಸೇವಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ತಾಂತ್ರಿಕ ಕಾರ್ಯಾಗಾರದಲ್ಲಿ ಮಾತನಾಡಿದರು. ಪ್ರಾಣಿ ಕಲ್ಯಾಣವು ಕೇವಲ ಪ್ರಾಣಿಗಳ ರಕ್ಷಣೆಗಷ್ಟೇ ಸೀಮಿತವಲ್ಲ, ಅದು ಸಾರ್ವಜನಿಕ ಆರೋಗ್ಯ, ಪರಿಸರ ಸಂರಕ್ಷಣೆ ಮತ್ತು ಗ್ರಾಮೀಣ ಆರ್ಥಿಕತೆಯೊಂದಿಗೆ ನೇರವಾಗಿ ಸಂಬಂಧಿಸಿದೆ. ಪ್ರಾಣಿಗಳ ಮೇಲೆ ಹಿಂಸೆ ತಡೆಯುವುದು ಹಾಗೂ ಅವುಗಳಿಗೆ ಸೂಕ್ತ ಆಶ್ರಯ, ಆಹಾರ ಮತ್ತು ಚಿಕಿತ್ಸೆಯನ್ನು ಒದಗಿಸುವುದು ನಮ್ಮ ಸಮಾಜದ ಜವಾಬ್ದಾರಿಯಾಗಿದೆ. ಜಿಲ್ಲೆಯಲ್ಲಿ ಬೀದಿ ನಾಯಿಗಳ ಜನಸಂಖ್ಯೆ ನಿಯಂತ್ರಣ, ನಿಯಮಿತ ಲಸಿಕಾ ಕಾರ್ಯಕ್ರಮ, ರೇಬೀಸ್ ತಡೆ ಹಾಗೂ ಪಶು ವೈದ್ಯಕಿಂ-ಯ ಶಿಬಿರಗಳನ್ನು ಸಮನ್ವಯದೊಂದಿಗೆ ನಡೆಸುವ ಅಗತ್ಯವಿದೆ ಎಂದರು. ಪಶುಪಾಲನಾ ಇಲಾಖೆಯ ಜಂಟಿ ನಿರ್ದೇಶಕ ಡಾ. ರಮೇಶ ದೊಡ್ಡಮನಿ ಮಾತನಾಡಿ, ವೈದ್ಯರು ಈ ತಾಂತ್ರಿಕ ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಪ್ರಾಣಿಗಳಿಗೆ ಹಿಂಸೆಯಾಗದಂತೆ ವೈಜ್ಞಾನಿಕವಾಗಿ ಚಿಕಿತ್ಸೆ ಮತ್ತು ಲಸಿಕೆ ನೀಡಬೇಕು ಎಂದರು. ಪ್ರಶಂಸೆ ಪತ್ರ ವಿತರಣೆ ಬೀದಿ ನಾಯಿಗಳ ನಿಯಂತ್ರಣದ ಕು-ರಿತು ಸುಪ್ರಿಂ ಸೂಚನೆಯಂತೆ ಕಾರ್ಯನಿರ್ವಹಿಸಿ ಶೇ. 100ರಷ್ಟು ಪ್ರಗತಿ ಸಾಧಿಸಿರುವುದಕ್ಕಾಗಿ ಯಲಬುರ್ಗಾ ಮತ್ತು ಕುಕನೂರು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ನಾಗೇಶ ಹಾಗೂ ಕಾರಟಗಿ ಪುರಸಭೆಯ ಮುಖ್ಯಾಧಿಕಾರಿ ಸಾಬಣ್ಣ ಕಟ್ಟೇಕಾರ ಅವರಿಗೆ ಕಾರ್ಯಾಗಾರದಲ್ಲಿ ಪ್ರಶಂಸಾ ಪತ್ರ ವಿತರನೆ ಮಾಡಲಾಯಿತು. ಕೊಪ್ಪಳ ಡಿಎಫ್‌ಓ ಕೆ. ನಿರ್ಮಲಾ, ವಿಷಯ ತಜ್ಞರಾದ ಬೀದರ ಪಶುವೈದ್ಯಕಿಯ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ. ವಿವೇಕ ಕಸರಳಿಕರ, ಶಿವಮೊಗ್ಗ ಪಶುವೈದ್ಯಕಿಂ-ಯ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ. ಎನ್.ಬಿ. ಶ್ರೀಧರ, ಹ್ಯೂಮೇನ್ ವರ್ಲ್ಡ ಫಾರ್ ಇಂಡಿಯಾ ಫೌಂಡೇಶನ್ ಹಿರಿಯ ತಜ್ಞ ರಮೇಶ ಭಜಂತ್ರಿ, ಪಶುಪಾಲನಾ ಮತ್ತು ಪಶುವೈದ್ಯಕಿಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ.ಮಲ್ಲಯ್ಯ, ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ. ಶರಣಬಸಪ್ಪ ರೋಣ ಇತರರಿದ್ದರು.

## ಜೀತ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ





ನೈಜ್ಯ ದೆಸೆ ನ್ಯೂಸ್

**ರಾಯಚೂರು ಫೆಬ್ರವರಿ 11 (ಕರ್ನಾಟಕ ವಾರ್ತೆ): ಜೀತ ಪದ್ಧತಿಯು ದೊಡ್ಡದಾದ ಸಾಮಾಜಿ-ಕ ಪಿಡುಗಾಗಿದ್ದು, ಇದರ ನಿರ್ಮೂಲನೆಗಾಗಿ ಎಲ್ಲರು ಕೈಜೋಡಿಸಬೇಕೆಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.**

ಫೆ.10ರ ಮಂಗಳವಾರ ದಂದು ತಾಲೂಕಿನ ಚಂದ್ರಬಂಡ ರಸ್ತೆಯ ಕಡ್ಗಂದೊಡ್ಡಿ ವ್ಯಾಪ್ತಿಯ ವಿ.ಬಿ.ಎಸ್ ಇಟ್ಟಿಗೆ ಭಟ್ಟಿಯಲ್ಲಿ ಜೀತ ಪದ್ಧತಿ ನಿರ್ಮೂಲನೆ ದಿನಾಚರಣೆ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮಕ್ಕೆ ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಜೀತ ಪದ್ಧತಿಗೆ ಬಡತನವೇ ಮೂಲ ಕಾರಣವಾಗಿದೆ. ಕಾರ್ಮಿಕರಿಗಾಗಿಯೇ ಇರುವ ಕಾಯ್ದೆ ಕಾನೂನುಗಳನ್ನು ಅರಿಯುವುದು ಅತ್ಯಂತ ಮಹತ್ವವಾಗಿದ್ದು, ಕಾರ್ಮಿಕ-ರಿಗಾಗಿಯೇ ಲಭ್ಯವಿರುವ ಉಚಿತ ಕಾನೂನು ಸಲಹೆ ಮತ್ತು ಸೇವೆಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಬೇಕು. ಹಾಗೂ ತೊಂದರೆಯಾದಲ್ಲಿ ಸಹಾಯವಾಣಿ ಸಂಖ್ಯೆ 15100ಗೆ ಕರೆ ಮಾಡಿ ಕಾನೂನು ಸೇವೆಗಳನ್ನು ಪಡೆದುಕೊಳ್ಳಬಹುದು ಎಂದರು.

ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಯಾರಾದರೂ ಎಲ್ಲಿಯಾದರೂ ಉದ್ಯೋಗ ಅವಕಾಶ ಪಡೆಯಲು ನಮಗೆ ಸಂವಿಧಾನಬದ್ಧ ಹಕ್ಕು ಇರುತ್ತದೆ. ಕೆಲಸ ಅರಸಿ ಬರುವ ಪ್ರತಿಯೊಬ್ಬರಿಗೂ ಉತ್ತಮ ಜೀವನ ಕಲ್ಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ಓಡಿಸ್ಸಾ, ಬಿಹಾರ, ಆಂಧ್ರ, ಮಹಾರಾಷ್ಟ್ರ ಮತ್ತು ಇತರೆ ಹೊರ ರಾಜ್ಯಗಳಿಂದ ವಲಸೆ ಕಾರ್ಮಿಕರು ವಲಸೆ ಬಂದು ಇಟ್ಟಿಗೆ ಭಟ್ಟಿಗಳಲ್ಲಿ, ಬೀದಿ ಬದಿಯಲ್ಲಿ, ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸಗಳಲ್ಲಿ ಹತ್ತಿ ಮಿಲ್, ರೈಸ್ ಮಿಲ್ ಕೆಲಸದಲ್ಲಿ ತೊಡಗಿಸಿಕೊಂಡಿರುವುದು ಕಂಡುಬರುತ್ತಿದೆ. ಈ ಜನತೆಗೆ ಕಾನೂನಾತ್ಮಕ ಹಕ್ಕುಗಳು ಹಾಗೂ ಸೌಲಭ್ಯಗಳನ್ನು ಪಡೆಯುವಂತೆ ಸಲಹೆ ನೀಡಿ, ಮಾಲೀಕರಿಗೆ ಕಾರ್ಮಿಕರನ್ನು ಜೀತಪದ್ಧತಿಯಲ್ಲಿ ತೊಡಗಿಸಿಕೊಳ್ಳದಂತೆ ಹಾಗೂ ಮಕ್ಕಳನ್ನು ಬಾಲ ಹಾಗೂ ಕಿಶೋರ ಕಾರ್ಮಿಕರನ್ನಾಗಿಸದೇ ಹತ್ತಿರದ ಅಂಗನವಾಡಿ ಮತ್ತು ಶಾಲೆಗೆ ಸೇರಿಸಿ ಕಡ್ಡಾಯವಾಗಿ ಶಿಕ್ಷಣವನ್ನು ನೀಡುವಂತೆ ಸೂಚಿಸಿದರು.

ಈ ವೇಳೆ ರಾಯಚೂರು 1 ಹಾಗೂ 2ನೇ ಕಾರ್ಮಿಕ ವೃತ್ತ ನಿರೀಕ್ಷಕರಾದ ಕುಮಾರಿ ಪ್ರಿಯಾಂಕ ಅವರು ಮಾತನಾಡಿ, ಜೀತ ಪದ್ಧತಿ ನಿರ್ಮೂಲನೆಗಾಗಿ 1976ರಲ್ಲಿ ಕಾಯ್ದೆ ಜಾರಿ ಬಂದಿರುವ ಕುರಿತು ಜೀತ ಪದ್ಧತಿ ನಿರ್ಮೂಲನೆ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ರಿಯಾಜ್ ಪಟೇಲ್ ವರ್ಕನಳ್ಳಿ, ಇಟ್ಟಿಗೆ ಭಟ್ಟಿ ಮಾಲೀಕರಾದ ಈರಣ್ಣ ಸೇ-ರಿದಂತೆ ಕಾರ್ಮಿಕ ಇಲಾಖೆಯ ಸಿಬ್ಬಂದಿ ಹಾಗೂ ಸ್ಥಳೀಯ ವಿವಿಧ ಇಟ್ಟಿಗೆ ಭಟ್ಟಿಗೆಗಳ ಮಾಲೀಕರು ಮತ್ತು ಕಾರ್ಮಿಕರು ಇದ್ದರು.

## ಶ್ರೀಶೈಲಂ ಜಾತ್ರೆ ಅಂಗವಾಗಿ ವಿಶೇಷ ಬಸ್ಸುಗಳ ಕಾರ್ಯಾಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಫೆ.10 ರಿಂದ ಫೆ.18ರವರೆಗೆ ಶ್ರೀಶೈಲಂ ಜಾತ್ರೆಯು ನಡೆಯುತ್ತಿದೆ. ಫೆ.15ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲದ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥ-ೋತ್ಸವ ಜರುಗಲಿರುವ ಪ್ರಯುಕ್ತ ಶ್ರೀಶೈಲಂ ಶ್ರೀಮಲ್ಲಿಕಾರ್ಜುನ ಜಾತ್ರಗೆ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ ವಿಶೇಷ ಬಸ್ಸುಗಳ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ.**



ಈ ಜಾತ್ರೆಗೆ ಪ್ರತಿ ವರ್ಷದಂತೆ ಈ ವರ್ಷವು ಸಹ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು-ಕರ್ನೂಲ್-ಶ್ರೀಶೈಲಂ, ಸಿಂಧನೂರು- ಆದೋನಿ- ಶ್ರೀಶೈಲಂ, ಸಿಂಧನೂರು- ರಾಯಚೂರು- ಕರ್ನೂಲ್-ಶ್ರೀಶೈಲಂ, ಲಿಂಗಸೂಗುರು- ರಾಯಚೂರು-ಕರ್ನೂಲ್- ಶ್ರೀಶೈಲಂ, ಲಿಂಗಸೂಗುರು-ಮಸ್ಕಿ- ಸಿಂಧನೂರು- ಆದೋನಿ- ಶ್ರೀಶೈಲಂ, ಮಾನವಿ- ರಾಯಚೂರು- ಕರ್ನೂಲ್-ಶ್ರೀಶೈಲಂ, ದೇವದುರ್ಗ- ರಾಯಚೂರು-ಕರ್ನೂಲ್- ಶ್ರೀಶೈಲಂ, ಮಸ್ಕಿ-ರಾಯಚೂರು- ಕರ್ನೂಲ್- ಶ್ರೀಶೈಲಂ, ಮಸ್ಕಿ- ಸಿಂಧನೂರು- ಆದೋನಿ- ಶ್ರೀಶೈಲಂ ಮಾರ್ಗದಲ್ಲಿ ಕಾರ್ಯಾಚರಣೆಗೆ ತರಲಾಗುತ್ತಿದೆ. 50 ಪ್ರಯಾಣಿಕರು ಲಭ್ಯ ಇದ್ದಲ್ಲಿ ಅವರ ಸ್ವ-ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸುವದಕ್ಕೆ ಕ್ರಮವನ್ನು ತೆಗೆದುಕೊಳ್ಳಲಾಗಿದೆ.

ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವದಕ್ಕೆ ಇಷ್ಟ ಪಟ್ಟಲ್ಲಿ, ಅಲ್ಲಿಗೆ ಕರೆದುಕೊಂಡು ಹೋಗಿ ಬರಲಾಗುತ್ತಿದ್ದು, ಶ್ರೀಶೈಲಂಗೆ ಹೋಗಿ ಬರುವ ಪ್ರಯಾಣಿಕರು ಈ ವಿಶೇಷ ಬಸ್ಸುಗಳ ಸೌರ್ಕಯವನ್ನು ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 1ನೇ ಘಟಕ ರಾಯಚೂರು: 7760992363, 2ನೇ ಘಟಕ ರಾಯಚೂರು: 7760992364, 3ನೇ ಘಟಕ ರಾಯಚೂರು: 7619351087, ಲಿಂಗಸೂಗುರು: 7760992365, ಸಿಂಧನೂರು: 7760992366, ಮಾನವಿ: 7760992367, ದೇವದುರ್ಗ: 7760992368, ಮಸ್ಕಿ: 7760992361 ಅಥವಾ ವಿಭಾಗೀಯ ಸಂಚಾರ ಅಧಿಕಾರಿ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ. ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಆರ್.ಬಿ.ತಿಮ್ಮಾಪುರ ವಿರುದ್ದ 6 ಸಾವಿರ ಕೋಟಿ ಹಗರಣ ಆರೋಪ ಸತ್ಯಕ್ಕೆ ದೂರ: ವೀರೇಶ ಉಪ್ಪಲದೊಡ್ಡಿ

ನೈಜ್ಯ ದೆಸೆ ನ್ಯೂಸ್

**ತಮ್ಮ ಅಧಿಕಾರಾವಧಿಯಲ್ಲಿ ರಸ್ತೆ ಅಭಿವೃದ್ಧಿ, ಕುಡಿವ ನೀರು, ಶಾಲೆಗಳ ಅಭಿವೃದ್ಧಿ, ರೈತರ ಸಮಸ್ಯೆಗಳಿಗೆ ಪರಿಹಾರ, ಬಡಜನರ ಕಲ್ಯಾಣಕ್ಕಾಗಿ ಅನೇಕ ಮಹತ್ವದ ಕೆಲಸಗಳನ್ನು ಮಾಡಿದ್ದಾರೆ. ಜನರ ಸಮಸ್ಯೆಗಳಿಗೆ ಸದಾ ಸ್ಪಂದಿಸಿ ಜನರೊಟ್ಟಿಗೆ ನಿಕಟ ಸಂಪರ್ಕದಲ್ಲಿರುವ ನಾಯಕರು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಅವರ ವಿರುದ್ಧ 6 ಸಾವಿರ ಕೋಟಿ ಹಗರಣ ಆರೋಪ ಬಿಜೆಪಿಗರು ಮಾಡುತ್ತಿದ್ದು ಇದು ಸತ್ಯಕ್ಕೆ ದೂರವಾದದು ಎಂದು ತಾಲೂಕು ಕಾಂಗ್ರೆಸ್ ಯುವ ಮುಖಂಡರು ಹಾಗೂ ವಿರುಪಾಪುರ ಜಿಲ್ಲಾ ಪಂಚಾಯತಿ ಆಕಾಂಕ್ಷಿ ವೀರೇಶ ಎನ್.ಉಪ್ಪಲದೊಡ್ಡಿ ಪ್ರತಿಕ್ರಿಯೆ ನೀಡಿದರು.**




ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಿಜೆಪಿಯವರು ಸುಖಾ ಸುಮ್ಮನೆ ರಾಜೀನಾಮೆಗೆ ಒತ್ತಾಯಿಸುವುದು ಅನಗತ್ಯ ಆರೋಪವಾಗಿದೆ. ಕೇಂದ್ರದ ಬಿಜೆಪಿ ಸರ್ಕಾರ ದೇಶದ ಜನರ ನಂಬಿಕೆ ಕುಗ್ಗಿಸುತ್ತಿದೆ. ಪಾರದರ್ಶಕತೆ, ಜನಪರ, ಪ್ರಾಮಾಣಿಕತೆ, ಆಡಳಿತದ ಮಾತು ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ ದೊಡ್ಡ ಹಗರಣವೇ ಮಾಡಿದೆ. ಪ್ರಧಾನ ಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆ ಅಡಿಯಲ್ಲಿ ಯುವ ಜನತೆಗೆ ಉದ್ಯೋಗ ಒದಗಿಸುವ ಮಹತ್ವಾಕಾಂಕ್ಷಿಯ ಯೋಜನೆಯಾಗಿದೆ. 2015 ರಿಂದ 2024 ರವರೆಗೆ ಒಟ್ಟು ಮೂರು ಹಂತಗಳಲ್ಲಿ 10,194 ಕೋಟಿ ವೆಚ್ಚ ಮಾಡಲಾಗಿದೆ. 3.30 ಲಕ್ಷ ಬ್ಯಾಚ್ ಗಳಲ್ಲಿ 1.30 ಕೋಟಿ ಜನ-ರಿಗೆ ತರಬೇತಿ ನೀಡಿದೆ ಎಂದು ಹೇಳುವ ಕೇಂದ್ರ ಸರ್ಕಾರ ಇದರ ಬಗ್ಗೆ ಸಂಪೂರ್ಣ ಮಾಹಿತಿಯೇ ಇಲ್ಲ. ಈ ಯೋಜನೆ ಅನುಷ್ಠಾನದಲ್ಲಿ ಹೆಜ್ಜೆಹೆಜ್ಜೆಗೂ ಬಹುದೊಡ್ಡ ಅಕ್ರಮ ನಡೆದಿದೆ ಎಂದು ಈಚೆಗೆ ಸಂಸತ್ತಿನಲ್ಲಿ ಮಂಡಿಸಲಾದ ಪ್ರಧಾನ ಮಂತ್ರಿ ಕೌಶಲ್ಯಾಭಿವೃದ್ಧಿ ಯೋಜನೆಯ ಲೆಕ್ಕಪ-ರಿಶೋಧನೆ ವರದಿಯಲ್ಲಿ ಉಲ್ಲೇಖ ಇದೆ ಎಂದು (ಸಿಎಜಿ) ಮಹಾಲೇಖಪಾಲರು ಹೇಳಿದ್ದಾರೆ.

ತರಬೇತಿ ನೀಡಿದ್ದಾರೆ ಎಂದು ಕೇಂದ್ರ ಸರ್ಕಾರದ ವರದಿ ಹೇಳುತ್ತಿದೆ. ಆದ-ರೆ ತರಬೇತಿ ಪಡೆದಿರುವ ಸಾವಿರಾರು ತರಬೇತಿ-ದಾರರು ಯಾರು? ಇದರ ಬಗ್ಗೆ ಮಾತನಾಡದ ಬಿಜೆಪಿಯವರು ಯಾವುದೇ ದಾಖಲಾತಿಗಳು ಇಲ್ಲದೆ ಅನಾವಶ್ಯಕವಾಗಿ ಆರೋಪ ಮಾಡುವುದು ಎಷ್ಟು ಸರಿ? ದಲಿತ ಸಮುದಾಯದ ಹಿರಿಯ ನಾಯಕ ಆರ್.ಬಿ.ತಿಮ್ಮಾಪುರ ಉತ್ತಮ ರೀತಿಯಲ್ಲಿ ರಾಜ್ಯದ ಅಬಕಾರಿ ಇಲಾಖೆಯನ್ನು ನಿಭಾಯಿಸುತ್ತಿದ್ದಾರೆ. ರಾಜ್ಯದಲ್ಲಿ ಬಾರ್ ಅಸೋಸಿಯೇಷನ್ ವತಿಯಿಂದ 14,101 ಬಾರ್‌ಗಳ ಲೈಸೆನ್ಸ್ ಹೊಂದಿವೆ. ಅದರಲ್ಲಿ 241 ಎಸ್.ಸಿ, ಎಸ್.ಟಿ, ಸಮುದಾಯದವರ ಅಂಗಡಿಗಳಿವೆ, 499 ಲೈಸೆನ್ಸ್ ರಿನಿವಲ್ ಆಗಿಲ್ಲ ಎಂದು ಮಾಹಿತಿ ನೀಡಿ, ಬಿಜೆಪಿಯವರು ಅಹೋ ರಾತ್ರಿ ಧರಣಿ ನಡೆಸುತ್ತಿದ್ದಾರೆ.

ಇದನ್ನು ಕೈ ಬಿಡಬೇಕು. ಇಲ್ಲದಿದ್ದಲ್ಲಿ ರಾಜ್ಯದಾದ್ಯಂತ ಮುಂದಿನ ದಿನಗಳಲ್ಲಿ ತೀವ್ರವಾದ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ನಂತರ ದಲಿತ ಮುಖಂಡ ಗುರುರಾಜ ಮುಕ್ಕುಂದ ಮಾತನಾಡಿ, ಲೈಸೆನ್ಸ್ ಪಡೆಯದೆ ಅನಧಿಕೃತವಾಗಿ ಬಾರ್ ಆ?ಯಂಡ್ ರೆಸ್ಟೋರೆಂಟ್‌ಗಳನ್ನು ನಡೆಸುತ್ತಿರುವ ಪ್ರಭಾವಿತ ವ್ಯಕ್ತಿಗಳ ಕೈವಾಡವು ಇದಾಗಿದೆ. ಇದಕ್ಕೆ ರಾಜೀನಾಮೆ ಅಗತ್ಯ ಇಲ್ಲ. ಯಾರೋ ಮಾಡಿದ ತಪ್ಪಿಗೆ ಅವರ ಹೆಸರನ್ನು ತಳುಕು ಹಾಕುವ ಕೆಲಸ ನಡೆಯುತ್ತಿದೆ ದಾಖಲೆ ಇದ್ದಲ್ಲಿ ಬಹಿರಂಗಗೊಳಿಲಿ ಎಂದರು. ಈ ವೇಳೆ: ಗುರುನಾಥ ವಕೀಲರು, ದುರಗೇಶ ಬಾಲಿ, ಗಾದಿಲಿಂಗಪ್ಪ ಅರಳಹಳ್ಳಿ, ನವೀನಕುಮಾರ, ಹನುಮೇಶ ಕರ್ನಿ, ಸೇರಿದಂತೆ ಅನೇಕ ಯುವ ಕಾಂಗ್ರೆಸ್ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

SBI ನೇಮಕಾತಿ 2026-2273 ಸರ್ಕಲ್ ಆಧಾರಿತ ಅಧಿಕಾರಿಗಳು (CBO) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಖಃಖ ನೇಮಕಾತಿ 2026: 2273 ಸರ್ಕಲ್ ಆಧಾರಿತ ಅಧಿಕಾರಿಗಳು (CBO) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಜನವರಿ 2026 ರ SBI ಅಧಿಕೃತ ಅಧಿಸೂಚನೆಯ ಮೂಲಕ ಸರ್ಕಲ್ ಆಧಾರಿತ ಅಧಿಕಾರಿಗಳು (CBO) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 18-ಫೆಬ್ರವರಿ-2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು (ಕೊನೆಯ ದಿನಾಂಕವನ್ನು 25-02-2026 ರವರೆಗೆ ವಿಸ್ತರಿಸಲಾಗಿದೆ) ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 18-02-2026 (ಕೊನೆಯ ದಿನಾಂಕವನ್ನು 25-02-2026 ರವರೆಗೆ ವಿಸ್ತರಿಸಲಾಗಿದೆ) ಅಧಿಕೃತ ವೆಬ್‌ಸೈಟ್: sbi.co.in

## ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಲು ಫೆ.15 ಕೊನೆಯ ದಿನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಫೆ.15ರವರೆಗೆ ವಿಸ್ತರಿಸಲಾಗಿದೆ.**

ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ಅರ್ಜಿಯ ಅವಧಿಯನ್ನು ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳವಂತೆ ಕೋರಲಾಗಿದೆ. ಬಿ.ಆರ್ಕ್, ಎಂ.ಸಿ.ಎ, ಎಂ.ಸಿ.ಎಚ್ (ವೈದ್ಯಕೀಯ), ಎಂ.ಡಿ, ಎಂ.ಎಸ್ (ಮಾಸ್ಟರ್ ಆಫ್ ಸರ್ಜರಿ), ಎಂ.ಎಸ್, ಎಂ.ಎಸ್ಸಿ (ಅಲೈಡ್ ಸೈನ್ಸಸ್), ಎಂಪಿಟಿ (ಫಿಸಿಯೋಥೆರಪಿ), ಎಂಎಚ್‌ಎ, ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್, ಎಂಪಿಎಚ್ (ಅಲೈಡ್ ಸೈನ್ಸಸ್), ಎಂ.ಎಸ್ಸಿ. ನರ್ಸಿಂಗ್, ಎಂ.ಎಸ್ಸಿ, ಎಂ.ಟೆಕ್, ಎಂಬಿಎ, ಎಂಬಿಎ ಫಿನ್‌ಟೆಕ್, ಎಂಬಿಎ (ಲಾಜಿಸ್ಟಿಕ್ಸ್ ಮ್ಯಾನೇಜ್‌ಮೆಂಟ್), ಎಂಬಿಬಿ-ಎಸ್, ಎಂಎಸ್ ಆಯುರ್ವೇದ, ಎಂಡಿ (ಆಯುರ್ವೇದ), ಎಂಡಿ (ಹೋಮ್), ಎಂಡಿಎಸ್, ಪಿಜಿ ಡಿಪ್ಲೊಮಾ ಇನ್ ಡೆಂಟಲ್, ಫಾರ್ಮ್.ಡಿ (ಪೋಸ್ಟ್ ಬ್ಯಾಕಲೌರಿಯೇಟ್), ಎಂ.ಫಾರ್ಮ್, ಬಿ.ಇ, ಬಿ.ಟೆಕ್, ಬಿ.ಎಸ್ಸಿ (ಆನರ್ಸ್), ಬಿ.ವಿ.ಎಸ್ಸಿ.&ಎ.ಎಚ್, ಬಿಎಎಂಎಸ್ (ಆಯುರ್ವೇದ), ಬಿಎಚ್‌ಎಂಎಸ್ (ಹೋಮಿಯೋಪತಿ), ಬಿಎನ್‌ವೈಎಸ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ), ಬಿಯುಎಂಎಸ್ (ಯುನಾನಿ), ಬಿಎಎಂಎಸ್, ಬಿಡಿಎಸ್, ಎಂ.ಆರ್ಕ್, ಬಿ.ಎಫ್.ಎಸ್ಸಿ, ಬಿ.ಫಾರ್ಮ್, ಫಾರ್ಮ್.ಡಿ, ಬಿ.ಎಸ್ಸಿ (ಅಲೈಡ್ ಸೈನ್ಸಸ್), ಬಿಪಿಟಿ (ಫಿಸಿಯೋಥೆರಪಿ), ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ, ಬಿ.ಡೆಸ್, ಬಿ.ಎಸ್ಸಿ. (ನರ್ಸಿಂಗ್), ಬಿ.ಎಸ್ಸಿ. (ಪೋಸ್ಟ್ ಬೇಸಿಕ್), ಬಿ.ಎಡ್, ಬಿ.ಪ್ಲಾನ್, ಡಿಎಂ (ವೈದ್ಯಕೀಯ), ಎಂ.ಫಿಲ್, ಬಿ ಟೆಕ್ ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ (ಪೂರ್ಣ ಸ್ಟ್ಯಾಕ್ ಡೆವಲಪ್ಮೆಂಟ್), ಬಿ ಟೆಕ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ (ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ), ಪ್ಯಾರಾಮೆಡಿಕಲ್ ಮತ್ತು ಎಲ್ಲಾ ಡಿಪ್ಲೊಮಾ ಕೋರ್ಸ್‌ಗಳ ವಿದ್ಯಾರ್ಥಿಗಳು ಫೆ.15ರೊಳಗಾಗಿ ವೆಬ್‌ಸೈಟ್ ವಿಳಾಸ: https://ssp.postmatric.karnataka.gov.in ನಲ್ಲಿ ಸಲ್ಲಿಸಬಹುದಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್‌ಸೈಟ್ ವಿಳಾಸ: https://bcwd.karnataka.gov.in ಮಾಹಿತಿಗಾಗಿ ಭೇಟಿ ನೀಡಬಹುದಾಗಿದೆ. ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಮೇಲ್: bcwdhelpline@gmail.com, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಅಥವಾ ಸಹಾಯಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ವಿರುಪಾಪುರ ಪಿಡಿಓ ವಿಕಲಚೇತನರಿಗೆ ಉದ್ಯೋಗ ಖಾತ್ರಿ ಕೆಲಸ ನೀಡದೆ ನಿರ್ಲಕ್ಷ್ಯ ಪ್ರತಿಭಟನೆ ಆರೋಪ

ನೈಜ್ಯ ದೆಸೆ ನ್ಯೂಸ್

**ಉದ್ಯೋಗ ಖಾತ್ರಿ ಯೋಜನಡಿಯಲ್ಲಿ ಅಂಗವಿಕಲರಿಗೆ 125 ದಿನ ಕೆಲಸ ನೀಡದೆ, ಅನ್ಯಾಯ ಮಾಡುತ್ತಿದ್ದಾರೆ. ಸಾರ್ವಜನಿಕರಿಗೆ ಎನ್.ಎಮ್.ಆರ್.ತೆಗೆಯುತ್ತಿದ್ದು, ಅದೇರೀತಿ ಅಂಗವಿಕಲರಿಗೂ ಕೂಡ ಎನ್.ಎಮ್. ಆರ್ ಸೀಟ್ ತೆಗೆಯಲು ಕೇಳಿದರೆ, ವಿರುಪಾಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ನಿರಾಕರಿಸುತ್ತಿದ್ದಾರೆ ಎಂದು ಮನವಿ ಮಾಡಿದರು.**

ತಾಲೂಕು ಪಂಚಾಯತಿ ಕಾರ್ಯಾಲಯದ ಮುಂದೆ ಅನೇಕ ವಿಕಲಚೇತನರು ಪ್ರತಿಭಟಿಸಿದರು. ನಂತರ ಸಹಾಯಕ ನಿರ್ದೇಶಕ ಅಮರಗುಂಡಪ್ಪ ಮಾತನಾಡಿ, ವಿಶೇಷ ಸೌಲಭ್ಯದಡಿಯಲ್ಲಿ ಇದ್ದಲ್ಲೇ ನಿಮ್ಮ ನಿಮ್ಮ ಗ್ರಾಮದಲ್ಲಿ ಕೆಲಸ ಕೊಡಲು ಪಿಡಿಓ ಅವರಿಗೆ ಸೂಚನೆ ಕೊಡಲಾಗುವುದು ಎಂದು ತಿಳಿಸಿದರು. ಪಂಚಾಯತಿ ಸಿಬ್ಬಂದಿಗಳು ನಮ್ಮನ್ನು ಅಸ್ವಸ್ಥರಂತೆ ಕಾಣುತ್ತಿದ್ದಾರೆ. ನರೇಗಾ ಕೆಲಸದಲ್ಲಿ



ಕಲ್ಲುಮುಳ್ಳುಗಳು ಕಂಟಿಯಲ್ಲಿ ಹೋಗಲು ವಿಕಲಚೇತನರಿಗೆ ತೀರ ಕಷ್ಟ ಆಗುತ್ತಿದೆ. ನಮಗೆ ಪ್ರತ್ಯೇಕವಾಗಿ ನಮ್ಮ ಗ್ರಾಮದಲ್ಲಿ ಎನ್.ಎಮ್.ಆರ್ ತೆಗೆಯಲು ನಿರಾಕರಿಸುತ್ತಿದ್ದಾರೆ. ಹೀಗಾಗಿ ನಾವು ಬಹಳಷ್ಟು ಶೋಷಣೆಗೆ ಒಳಗಾಗಿದ್ದು ಜೀವನ ನಡೆಸಲು ಕಷ್ಟಕರವಾಗಿರುತ್ತದೆ. ವಿಕಲ ಚೇತನರಿಗೆ ಪ್ರತ್ಯೇಕವಾಗಿ ನಮ್ಮ ಗ್ರಾಮದಲ್ಲಿ ನಮಗೆ 125 ದಿನಗಳ ಕೂಲಿ ಕೆಲಸವನ್ನು ನೀಡಬೇಕು ಮತ್ತು ಅಂಗವಿಕಲರಿಗೆ ಶೇ.5ರಷ್ಟು ಯೋಜನೆಯ ಅಡಿಯಲ್ಲಿ ಬರುವ ಅನುದಾನ ಕೆಲವು ವರ್ಷಗಳಿಂದ ಬಳಕೆಯಾಗಿರುವುದಿಲ್ಲ. ಮತ್ತು ನೀಡುತ್ತಿಲ್ಲ. ಹಾಗೂ ಕರವಸೂಲಿ, ವಸತಿ ಹಂಚಿಕೆಯಲ್ಲಿ ಅನ್ಯಾಯವಾಗಿದ್ದು, ಗ್ರಾಮ ಪಂಚಾಯತಿಯಲ್ಲಿ ಶೇ.5 ರಷ್ಟು ಅನುದಾನದ ಮಾಹಿತಿ ನೀಡುತ್ತಿಲ್ಲ.

ಈ ಹಿಂದೆ ದಿ. 29-12-2025 ಹಾಗೂ 04-02-2026 ರಂದು ಈ ವಿಷಯದ ಕುರಿತು ವಿರುಪಾಪುರ ಗ್ರಾಮ ಪಂಚಾಯತಿಗೆ ಮನವಿ ಸಲ್ಲಿಸಿದರು ಕೂಡ ಯಾವುದೇ ಪ್ರಯೋಜನವಾಗಿಲ್ಲ. ವಿಕಲಚೇತನರ ಅನುದಾನದ ಹಿಂಬರಹ ನೀಡಿರುವುದಿಲ್ಲ. ಅಧಿಕಾರಿಗಳು ಗಮನ ಹರಿಸಿ ಕೂಡಲೇ ವಿಕಲಚೇತನಗರಿಗೆ ಸಿಗಬೇಕಾದ ಸೌಲಭ್ಯವನ್ನು ಕೂಡಲೇ ದೊರಕಿಸುಕೊಡುವಂತೆ ವಿನಾಯಕ ಮಲ್ಲದಗುಡ್ಡ ಮನವಿ ಮಾಡಿದರು. ಈ ವೇಳೆ: ಬಸವರಾಜ ದೊಡ್ಡಮನಿ, ಪ್ರಕಾಶ ಶ್ರೇಷ್ಠಿ, ಶೇಖರಗೌಡ ಅರಳಹಳ್ಳಿ, ಯಮನೂರ ಅರಳಹಳ್ಳಿ, ಈಶ್ವರಯ್ಯಸ್ವಾಮಿ, ಮಲ್ಲೇಶಗೌಡ, ಅಂಬಣ್ಣ ಗೋಧಿ, ಹನುಮೇಶ ನವಲಿ, ಸೇರಿದಂತೆ ಅನೇಕರಿದ್ದರು.

## ಯುವನಿಧಿ ಫಲಾನುಭವಿಗಳ ದಾಖಲೆ ಪರಿಶೀಲನೆ




ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಯುವನಿಧಿ ಫಲಾನುಭವಿಗಳ ದಾಖಲಾತಿಗಳನ್ನು ಪರಿಶೀಲಿಸಲಾಯಿತು ಎಂದು ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಮಹಿಬೂಬಸಾಬ ಮುದ್ದಾಪೂರು ತಿಳಿಸಿದರು.**

ನಂತರ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ ಯಾದವ ಮಾತನಾಡಿ ತಾಲೂಕಿನ ಒಟ್ಟು 526 ಯುವನಿಧಿ ಫಲಾನುಭವಿಗಳ ಪೈಕಿ 65 ಜನ ಯುವ ನಿಧಿ ಫಲಾನುಭವಿಗಳ ದಾಖಲೆಗಳ ಪರಿಶೀಲಿಸಿ ಸರಕಾರದ (ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಕೇಂದ್ರ) ರಾಯಚೂರುದಲ್ಲಿ ಸಿಗುವ ಸ್ವಯಂ ಉದ್ಯೋಗದ ತರಬೇತಿಗಳ ಮಾಹಿತಿಯನ್ನು ನಿರುದ್ಯೋಗ ಯುವಕ, ಯುವತಿಯರಿಗೆ ಮಾಹಿತಿ ನೀಡಲಾಯಿತು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಸಹಾಯಕ ನಿದೇರ್ಶಕ ಸೋಮನಗೌಡ ಪಾಟೀಲ್, ತಾಲೂಕ ಪಂಚಾಯತಿಯ ಎನ್ ಆರ್‌ಎಲ್-ಎಂ ಯೋಜನೆಯ ವಲಯ ಮೇಲ್ವಿಚಾರಕ ಪ್ರಕಾಶ ಹಾಗೂ ಸಿಬ್ಬಂದಿಗಳಿದ್ದರು, ಮಸ್ಕಿ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಯುವನಿಧಿ ಫಲಾನುಭವಿಗಳ ದಾಖಲಾತಿ ಪರಿಶೀಲಿಸಿದರು.

## ಪುರಾಣ ಆರಂಭೋತ್ಸವ ಕಾರ್ಯಕ್ರಮದಲ್ಲಿ ಪೂಜ್ಯ ಶಿವಯೋಗಿ ಸ್ವಾಮೀಜಿ ಪುರಾಣ-ಪ್ರವಚನಗಳಿಂದ ಮಾನಸಿಕ ನೆಮ್ಮದಿ ಪ್ರಾಪ್ತಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮನುಷ್ಯನ ಬದುಕು ಇಂದು ಯಾಂತ್ರಿಕೃತ ಗೊಂಡಿರುವುದರಿಂದ ಒತ್ತಡದಿಂದಾಗಿ ಮಾನಸಿಕ ನೆಮ್ಮದಿ ಇಲ್ಲದಂತಾಗಿದೆ. ಮಹಾಪುರುಷರ ಸಂತ ಶರಣರ ಜೀವನದ ಕುರಿತು ಪ್ರವಚನಗಳನ್ನು ಆಲಿಸುವುದರಿಂದ ಮಾನಸಿಕ ನೆಮ್ಮದಿ ಪ್ರಾಪ್ತಿಯಾಗಿ ಜೀವನ ಪಾವನವಾಗುತ್ತದೆ ಎಂದು ದೇವರ ಹಿಪ್ಪರಗಿ ಪರದೇಶಿ ಮಠದ ಪೂಜ್ಯ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.**

ತಾಲೂಕಿನ ನಾವದಗಿ ಗ್ರಾಮದ ಶ್ರೀ ಪರ್ವತೇಶ್ವರ ಬ್ರಹನ್ಮಠದ ಷ.ಬ್ರ.108 ಶ್ರೀ ರಾಜ ಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರ ಗುರು ಪಟ್ಟಾಧಿಕಾರದ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡ"



ಗುಡ್ಡಾಪುರದ ಶ್ರೀ ದಾನಮ್ಮ ದೇವಿ ಪುರಾಣ" ಆರಂಭೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಕಲಕೇರಿಯ ಪೂಜ್ಯ ಶ್ರೀ ಸಿದ್ದರಾಮ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ರಾಜೇಂದ್ರ ಶ್ರೀಗಳ ಗುರು ಪಟ್ಟಾ ಧಿಕಾರದ ಕಾರ್ಯಕ್ರಮವನ್ನು ಇಡೀ ನಾಡಿನಲ್ಲಿಯೇ ಹೆಸರುವಾಸಿಯಾಗಿ ಮಾಡಿದ್ದೀರಿ ಇದು ನೀವು ಪೂಜ್ಯರ ಹಾಗೂ ಶ್ರೀಮಠದ ಕುರಿತು ಹೊಂದಿರುವ ಅಪಾರ ಕಾಳಜಿಯನ್ನು ತೋರಿಸುತ್ತದೆ ಈ ಪುರಾಣ ಕಾರ್ಯಕ್ರಮ ಮಾರ್ಚ್ 2ರವರೆಗೆ ನಡೆಯಲಿದೆ ಇದರ ಸದುಪಯೋಗ ಮಾಡಿಕೊಳ್ಳಿ ಎಂದರು.

ಸಾಸನೂರ ತುಂಬಗಿ ಹಿರೇಮಠದ ಮ.ನಿಪ್ರ. ಶ್ರೀಮಹಾಂತಲಿಂಗ ಶಿವಾಚಾರ್ಯರು ದಿವ್ಯ ಸಾನಿದ್ಯ ವಹಿಸಿ ಆಶೀರ್ವಚನ ನೀಡಿದರು. ಪೂಜ್ಯ ಷ.ಬ್ರ.ಶ್ರೀ ರಾಜ ಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯ ಮಹಾಸ್ವಾಮಿಗಳು ಸಮಾರಂಭದ ಸಾನಿಧ್ಯ ವಹಿಸಿದ್ದರು. ವೇ.ಮೂ.ಡಾ. ಗುರುಲಿಂಗಯ್ಯ ಹಿರೇಮಠ(ಶಹಾಪುರ) ಸಮ್ಮುಖ ವಹಿಸಿದ್ದರು. ವೇದಿಕೆ ಕಾರ್ಯಕ್ರಮ ಮುನ್ನ ಗ್ರಾಮ ದೇವತೆಗೆ ಉಡಿತುಂಬಿ ಶ್ರೀ ಪರ್ವತೇಶ್ವರ ಗದ್ದುಗೆಗೆ ಪೂಜೆ ಸಲ್ಲಿಸಿ ಮೆರವಣಿಗೆಯೊಂದಿಗೆ ವೇದಿಕೆಗೆ ಆಗಮಿಸಲಾಯಿತು. ಪ್ರವಚನಕಾರ ವೇ.ಮೂ. ರಾಚಯ್ಯ ಶಾಸ್ತ್ರಿ ಹಿರೇಮಠ, ಸಂಗೀತಗಾರ ಸೋಮಯ್ಯ ಸ್ವಾಮಿ, ತಬಲವಾದಕ ಮಹಾಂತೇಶ ಹರನಾಳ,ಸಾಹಿತಿ ಬಸವರಾಜ ಗೊರಜಿ(ಕೊಡಗಾನೂರ),ಗ್ರಾಮದ ಗಣ್ಯರು ಹಿರಿಯರು ಹಾಗೂ ಮಠದ ಸದ್ಭಕ್ತರು ಇದ್ದರು.

## ಇಂದು ಜಿಲ್ಲಾ ಮಟ್ಟದ ರೈತ ಸಮಾವೇಶ: ಕಲ್ಮಠಶ್ರೀ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ಕಲ್ಮಠ ಗಾರಿಗೆ ಜಾತ್ರೆ ಅಂಗವಾಗಿ ಫೆ.12 ರಂದು ಬೆಳಿಗ್ಗೆ 10.30ಕ್ಕೆ ಕೃಷಿ ಇಲಾಖೆ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ರೈತ ಸಂಘ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕ ಮಾಧ್ಯಮ ಸಮಿತಿ ವತಿಯಿಂದ ಹಮ್ಮಿಕೊಂಡ ಜಿಲ್ಲಾ ಮಟ್ಟದ ರೈತ ಸಮಾವೇಶವನ್ನು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ.ಎ.ಆರ್ ಕುರುಬರ ಉದ್ಘಾಟಿಸಲಿದ್ದಾರೆ,**

ಕೃಷಿ ವಸ್ತು ಪ್ರದರ್ಶನ ಮಳಿಗೆಗಳನ್ನು ಜಿಲ್ಲಾ ಕೃಷಿ ಜಂಟಿ ನಿರ್ದೇಶಕರಾದ ಪ್ರಕಾಶ ಆರ್ ಚೌಹಾಣ್ ಉದ್ಘಾಟಿಸಲಿದ್ದಾರೆ.



ದಿವ್ಯಸಾನಿಧ್ಯವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು, ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಉಚಿತ ಆರೋಗ್ಯ ಶಿಬಿರವನ್ನು ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್ ಬೆಟ್ಟದೂರು ವಹಿಸಿಕೊಳ್ಳಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಟಿ.ಎ.ಪಿ.ಸಿ. ಎಂ.ಸಿ. ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವಾತಿ,ತಾ. ಸಹಾಯಕ ಕೃಷಿ ನಿರ್ದೇಶಕರಾದ ಗುರುನಾಥ ಭೂಸನೂರ, ಅ.ಭಾ.ವೀ.ಲಿಂ.ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಮಿರ್ಜಾಪುರ್,ತಾ. ಅಧ್ಯಕ್ಷರಾದ ಅರುಣಚಂದಾ,ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸಿದ್ದಲಿಂಗಪ್ಪ ವಕೀಲರು, ತಾ.ವೀರಶೈವಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರ ಪಾಟೀಲ್,ಗೌ. ಅಧ್ಯಕ್ಷರಾದ ಶ್ರೀಧರಸ್ವಾಮಿ,, ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ. ಕೃ.ವಿ.ವಿ.ರಾಯಚೂರು ಕೃಷಿ ವಿಜ್ಞಾನಿಗಳಾದ ಡಾ.ಪ್ರಭುರಾಜ್.ಎ, ಡಾ. ಎಂ.ಎ. ಬಸವಣ್ಣೆಪ್ಪ, ಡಾ.ತಿಮ್ಮಣ್ಣ, ಮಂಡ್ಯದ ಸಾವಯವ ರೈತ ಕೃಷ್ಣಪ್ಪ ಬೆನ್ನೂರು, ಹಿರಿಯ ಅಂಕಣಕರಾರದ ಅಮರೇಗೌಡ ಗೋನಾವರ , ಡಾಬಸವಪ್ರಸಾದ್.ಬಿ. ಪಕ್ಷಿ ಪ್ರೇಮಿ ಸಲ್ಲಾವುದಿನ್ನ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪನ್ಯಾಸ ನೀಡಲಿದ್ದಾರೆ. ಗೋಷ್ಠಿಗಳ ಸಂಚಲನೆಯನ್ನು ಹಿರಿಯ ವರದಿಗಾರರಾದ ಬಸವರಾಜ ಭೋಗವತಿ ನಿರ್ವಹಿಸಲಿದ್ದಾರೆ. ಕೃಷಿ ಕ್ಷೇತ್ರದಲ್ಲಿನ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ವ್ಯಕ್ತಿಯ ಸರ್ವಾಂಗೀಣ ಪ್ರಗತಿಗೆ ಶಿಕ್ಷಣ ಅಗತ್ಯ: ಅಧ್ಯಕ್ಷ ಅಸ್ಕಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಸಮಾಜದ ಉನ್ನತಿ ಹಾಗೂ ಪ್ರಗತಿಗೆ ಶಿಕ್ಷಣ ಅತ್ಯವಶ್ಯಕವಾಗಿದೆ ಅದು ಸಮಾಜದ ಭವಿಷ್ಯವನ್ನು ನಿರ್ಧರಿಸುತ್ತದೆ ಎಂದು ಅಸ್ಕಿ ಫೌಂಡೇಶನ್ ಕೊಣ್ಣೂರ ಅಧ್ಯಕ್ಷ ಸಿ.ಬಿ.ಅಸ್ಕಿ ಹೇಳಿದರು. ಮಂಗಳವಾರ ಪಟ್ಟಣದ ಟೀಪು ನಗರ ಬಡಾವಣೆಯಲ್ಲಿ ಇಕರಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ವತಿಯಿಂದ ಹಮ್ಮಿಕೊಂಡ 19ನೇ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಮಾತನಾಡಿದರು.**

ಇಕರಾ ಶಿಕ್ಷಣ ಸಂಸ್ಥೆಯು ಅಲ್ಪಸಂಖ್ಯಾತ ಸಮುದಾಯದ ಮಕ್ಕಳನ್ನು ಶೈಕ್ಷಣಿಕವಾಗಿ ಮುಖ್ಯ ವಾಹಿನಿಗೆ ತರುವ ಕಳಕಳಿಯಿಂದ ಕಳೆದ 19 ವರ್ಷಗಳಿಂದ ನಿರಂತರವಾಗಿ ಪ್ರಯತ್ನಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ, ನಮ್ಮ ಫೌಂಡೇಶನ್ ವತಿಯಿಂದ ಈ ಸಂಸ್ಥೆಗೆ ಸಂಪೂರ್ಣ ಸಹಕಾರ ನೀಡುತ್ತೇನೆ ಎಂದರು. ಮುದ್ದೇಬಿಹಾಳ ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರ ಮಠ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ



ಉರ್ದು ಶಾಲೆಯಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ ಇದರ ಕುರಿತು ಸಮಾಜದ ಗಣ್ಯರು ಚಿಂತಿಸಬೇಕು. ಈ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರಗಳನ್ನು ಕೊಡುತ್ತಿರುವುದು ಸಂತೋಷದ ಸಂಗತಿಯಾಗಿದೆ ಎಂದರು. ಇದೇ ಸಂದರ್ಭದಲ್ಲಿ ಕಳೆದ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಇಕರಾ ಉರ್ದು ಶಾಲೆ ವಾರ್ಷಿಕೋತ್ಸವದಲ್ಲಿ ಅಧ್ಯಕ್ಷ ಅಸ್ಕಿ ಅಭಿಮತ ಶಿಕ್ಷಣದಿಂದಲೇ ಸಮಾಜದ ಪ್ರಗತಿ ಸಾಧ್ಯ ತಾಳಿಕೋಟಿ: ಸಮಾಜದ ಉನ್ನತಿ ಹಾಗೂ ಪ್ರಗತಿಗೆ ಶಿಕ್ಷಣ ಅತ್ಯವಶ್ಯಕವಾಗಿದೆ ಅದು ಸಮಾಜದ ಭವಿಷ್ಯವನ್ನು ನಿರ್ಧರಿಸುತ್ತದೆ ಎಂದು ಅಸ್ಕಿ ಫೌಂಡೇಶನ್ ಕೊಣ್ಣೂರ ಅಧ್ಯಕ್ಷ ಸಿ.ಬಿ.ಅಸ್ಕಿ ಹೇಳಿದರು. ಮಂಗಳವಾರ ಪಟ್ಟಣದ ಟೀಪು ನಗರ ಬಡಾವಣೆಯಲ್ಲಿ ಇಕರಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ವತಿಯಿಂದ ಹಮ್ಮಿಕೊಂಡ 19ನೇ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಮಾತನಾಡಿದರು. ಇಕರಾ ಶಿಕ್ಷಣ ಸಂಸ್ಥೆಯು ಅಲ್ಪಸಂಖ್ಯಾತ ಸಮುದಾಯದ ಮಕ್ಕಳನ್ನು ಶೈಕ್ಷಣಿಕವಾಗಿ ಮುಖ್ಯ ವಾಹಿನಿಗೆ ತರುವ ಕಳಕಳಿಯಿಂದ ಕಳೆದ 19 ವರ್ಷಗಳಿಂದ ನಿರಂತರವಾಗಿ ಪ್ರಯತ್ನಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ, ನಮ್ಮ ಫೌಂಡೇಶನ್ ವತಿಯಿಂದ ಈ ಸಂಸ್ಥೆಗೆ ಸಂಪೂರ್ಣ ಸಹಕಾರ ನೀಡುತ್ತೇನೆ ಎಂದರು.

ಮುದ್ದೇಬಿಹಾಳ ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರ ಮಠ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಉರ್ದು ಶಾಲೆಯಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ ಇದರ ಕುರಿತು ಸಮಾಜದ ಗಣ್ಯರು ಚಿಂತಿಸಬೇಕು. ಈ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರಗಳನ್ನೂ ಕೊಡುತ್ತಿರುವುದು ಸಂತೋಷದ ಸಂಗತಿಯಾಗಿದೆ ಎಂದರು. ಇದೇ ಸಂದರ್ಭದಲ್ಲಿ ಕಳೆದ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ಉತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತೆ ಬಿ.ಎಲ್.ಬಿರಾದಾರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಅಲ್ ಹುದಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಂ.ಐ.ಕೆಂಭಾವಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ, ವಿಜಯಪುರ ಮಾಜಿ ಮೇಯರ ಅಬ್ದುಲ್ ರಜಾಕ ಹೊರ್ತಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮೆಹಬೂಬ ಕೆಂಭಾವಿ, ಅಲ್ಪಸಂಖ್ಯಾತ ಮುಖಂಡ ನಿರಂಜನಶಾ ಮಕಾನದಾರ, ಪ್ರೌಢ ಶಾಲೆ ಸಂಚಾಲಕ ಸಲಾವುದ್ದೀನ ಇರ್ಫಾನ ಖಾಜಿ,ಹಸನಸಾಬ ಕೊರ್ಕಿ, ಶಫೀಕ ಇನಾಮದಾರ, ಮುಖ್ಯ ಗುರುಗಳಾದ ಜಾವೀದ ಎಂ.ಕೆಂಭಾವಿ, ಮುರ್ತುಜಾ(ಮುದ್ದು) ಪಟೇಲ, ಎಸ್.ಎ.ನಾಲಬಂದ, ಮೈನುದ್ದೀನ ಸಿಪಾಯಿ, ಮಶಾಕ್ ಪಟೇಲ, ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕ ವರ್ಗ, ಪಾಲಕರು ಹಾಗೂ ವಿದ್ಯಾರ್ಥಿಗಳು ಇದ್ದರು. ಶಿಕ್ಷಕಿ ಬಿ.ಎಲ್.ಬಿರಾದಾರ ನಿರೂಪಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# BBM LLB

BBM LLB (Bachelor of Business Management + Bachelor of Laws) ಎನ್ನುವುದು 5 ವರ್ಷಗಳ ಇಂಟಿಗ್ರೇಟೆಡ್ ಕಾನೂನು ಪದವಿಯಾಗಿದೆ. ಬಿಬಿಎ ಎಲ್‌ಎಲ್‌ಬಿ ಐದು ವರ್ಷಗಳ ಸಂಯೋಜಿತ ಕಾನೂನು ಕಾರ್ಯಕ್ರಮವಾಗಿದೆ . ಇದು ಎರಡು ಕೋರ್ಸ್‌ಗಳ ಸಂಯೋಜನೆಯನ್ನು ನೀಡುತ್ತದೆ: ಬ್ಯಾಚುಲರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ ಮತ್ತು ಬ್ಯಾಚುಲರ್ ಆಫ್ ಲೆಜಿಸ್ಲೇಟಿವ್ ಲಾ. ಇದು ಡ್ಯುಯಲ್-ಪದವಿಪೂರ್ವ ಪದವಿಯಾಗಿದ್ದು ಅದು ನಿಮಗೆ ವ್ಯವಹಾರ ನಿರ್ವಹಣೆ ಮತ್ತು ಕಾನೂನು ಎರಡರಲ್ಲೂ ಆಳವಾದ ಜ್ಞಾನವನ್ನು ನೀಡುತ್ತದೆ . ನೀವು 12 ನೇ ತರಗತಿಯ ನಂತರ ಈ ಕೋರ್ಸ್ ಅನ್ನು ಮುಂದುವರಿಸಬಹುದು. ಬಿಬಿಎ ಎಲ್‌ಎಲ್.ಬಿ ಪಠ್ಯಕ್ರಮವು ಕಾನೂನು ತತ್ವಗಳನ್ನು ಹೇಗೆಬಳಸಿಕೊಳ್ಳುವುದು ಮತ್ತು ಕಾರ್ಪೊರೇಟ್ ನಿಯಂತ್ರಣ, ಆಡಳಿತ, ಹಣಕಾಸು ನಿರ್ವಹಣೆ, ಸಲಹಾ, ಮಾನವ ಸಂಪನ್ಮೂಲ ನಿರ್ವಹಣೆ, ಹೂಡಿಕೆ ಬ್ಯಾಂಕಿಂಗ್, ವಿಮೆ ಮತ್ತು ಇತರ ಕ್ಷೇತ್ರಗಳಲ್ಲಿ ಅವುಗಳನ್ನು ಹೇಗೆ ಅನ್ವಯಿಸುವುದು ಎಂಬುದನ್ನು ಕಲಿಸುತ್ತದೆ. ಭಾರತದಲ್ಲಿ ಬಿಬಿಎ ಎಲ್‌ಎಲ್.ಬಿ ಪ್ರವೇಶಗಳು ಅರ್ಹತೆ ಮತ್ತು ಪ್ರವೇಶ ಪರೀಕ್ಷೆಗಳೆರಡನ್ನೂ ಆಧರಿಸಿವೆ . ಇದು ವ್ಯವಹಾರ ನಿರ್ವಹಣೆ ಮತ್ತು ಕಾನೂನಿನ ಜ್ಞಾನವನ್ನು ಸಂಯೋಜಿಸುತ್ತದೆ. 12ನೇ ತರಗತಿಯ ನಂತರ ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆ (CLAT/LSAT) ಮೂಲಕ ಪ್ರವೇಶ ಪಡೆಯಬಹುದು. ಇದು ಕಾರ್ಪೊರೇಟ್ ಕಾನೂನು, ನಿರ್ವಹಣೆ ಮತ್ತು ಕಾನೂನು ವೃತ್ತಿಯಲ್ಲಿ ಭವಿಷ್ಯವನ್ನು ರೂಪಿಸಲು ಸಹಾಯ ಮಾಡುತ್ತದೆ. BBM LLB ಕೋರ್ಸ್ ವಿವರಗಳು (BBM LLB Course Details in Kannada): ಕೋರ್ಸ್ ಅವಧಿ: 5 ವರ್ಷಗಳು (10 ಸೆಮಿಸ್ಟರ್‌ಗಳು). ಅರ್ಹತೆ: ಯಾವುದೇ ಮಾನ್ಯತೆ ಪಡೆದ ಮಂಡಳಿಯಿಂದ 10+2 ಅಥವಾ ಪಿಯುಸಿ (PUC) ಯಲ್ಲಿ ಕನಿಷ್ಠ 45%–50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರವೇಶ ಪ್ರಕ್ರಿಯೆ: CLAT, AILET, LSAT, ಅಥವಾ ವಿಶ್ವವಿದ್ಯಾಲಯ ಮಟ್ಟದ ಪ್ರವೇಶ ಪರೀಕ್ಷೆಗಳು (Alliance University, ಇತ್ಯಾದಿ). ಪಠ್ಯಕ್ರಮ: ಮ್ಯಾನೇಜ್‌ಮೆಂಟ್ ವಿಷಯಗಳು (ಹಣಕಾಸು, ಮಾರ್ಕೆಟಿಂಗ್, ಮಾನವ ಸಂಪನ್ಮೂಲ) ಮತ್ತು ಕಾನೂನು ವಿಷಯಗಳು (ಕಾರ್ಪೊರೇಟ್ ಕಾನೂನು, ನಾಗರಿಕ ಕಾನೂನು, ಕ್ರಿಮಿನಲ್ ಕಾನೂನು, ಸಾಂವಿಧಾನಿಕ ಕಾನೂನು). ವಿಶೇಷತೆ: ವ್ಯಾಪಾರ ಕಾನೂನು, ಬೌದ್ಧಿಕ ಆಸ್ತಿ ಹಕ್ಕುಗಳು (IPR), ಅಂತರರಾಷ್ಟ್ರೀಯ ಕಾನೂನು ಇತ್ಯಾದಿಗಳಲ್ಲಿ ಪರಿಣತಿ ಪಡೆಯಬಹುದು. ಉದ್ಯೋಗಾವಕಾಶಗಳು: ಕಾರ್ಪೊರೇಟ್ ವಕೀಲರು (Corporate Lawyer) ಕಾನೂನು ಸಲಹೆಗಾರರು (Legal Advisor in Companies) ಮಾನವ ಸಂಪನ್ಮೂಲ ವ್ಯವಸ್ಥಾಪಕರು (HR Manager) ಕಾನೂನು ವಿಶ್ಲೇಷಕರು (Legal Analyst) ನ್ಯಾಯಾಂಗ ಸೇವೆಗಳು

## ದೇವದಾಸಿ ಪುನರ್ವಸತಿ ಯೋಜನೆ ಕಚೇರಿಯಲ್ಲಿ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ದೇವದಾಸಿ ಪುನರ್ವಸತಿ ಯೋಜನೆ ಕಚೇರಿಯಲ್ಲಿ 2025-26ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಯೋಜನಾಧಿಕಾರಿಗಳು 1 ಹುದ್ದೆಗೆ ಎಂಎಸ್‌ಡಬ್ಲ್ಯು, ಎಂಎ ಇನ್ ಸಮಾಜಶಾಸ್ತ್ರ, ಎಂಎ.ಎಂಎಸ್ಸಿ ಇನ್ ಮನಶ್ಶಾಸ್ತ್ರ ಪದವಿ ಜೊತೆಗೆ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು.**

ನಿವೃತ್ತ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ 65 ವರ್ಷ ವಯಸ್ಸು ಇರುವವರಿಗೆ ಅದ್ಯತೆ ನೀಡಲಾಗುವುದು. ಮಾನವಿ ಹಾಗೂ ಲಿಂಗಸುಗೂರಿನಲ್ಲಿ ಯೋಜನಾ ಅನುಷ್ಠಾನಾಧಿಕಾರಿಗಳು 2 ಹುದ್ದೆಗೆ ಬಿಎಸ್‌ಡಬ್ಲ್ಯು/ಬಿಎ/ ಮನೋವಿಜ್ಞಾನ, ಎಂಎ/ ಎಂಎಸ್ಸಿ ಇನ್ ಸಮಾಜಶಾಸ್ತ್ರ ಪದವಿ ಜೊತೆಗ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಸರ್ಕಾರದ ಅಧಿನ ಸಂಸ್ಥೆಗಳಲ್ಲಿ ಕನಿಷ್ಟ 3-4 ವರ್ಷಗಳ ಹೊಂದಿರುವವರಿಗೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮಕ್ಕಳಿಗೆ ಅದ್ಯತೆ ನೀಡಲಾಗುವುದು. ದಾಖಲಾಧಿಕಾರಿ 1 ಹುದ್ದೆಗೆ ಬಿಕಾಂ ಪದವಿ ಹಾಗೂ ತತ್ಸಮಾನ ಪದವಿ ಮತ್ತು ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಕಂಪ್ಯೂಟರ್ ಜ್ಞಾನ ಮತ್ತು ಕನ್ನಡ/ಇಂಗ್ಲಿಷ ಟೈಪಿಂಗ್ ಜ್ಞಾನ ಕಡ್ಡಾಯ ಹೊಂದಿರಬೇಕು. ಲೆಕ್ಕಿಗರು ಗುಮಾಸ್ತ 1 ಹುದ್ದೆಗೆ ದ್ವಿತಿಯ ಪಿಯುಸಿ ಅಥವಾ ತತ್ಸಮಾನ ಹಾಗೂ ಕಂಪ್ಯೂಟರ್ ಜ್ಞಾನ ಕಡ್ಡಾಯ ಹೊಂದಿರಬೇಕು. ಸ್ವಯಂ ಸೇವಕಿಯರ 5 ಹುದ್ದೆಗೆ ಮಾಜಿ ದೇವದಾಸಿಯರನ್ನು/ ಕುಟುಂಬದವರನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಕಚೇರಿ ಸಹಾಯಕ 1 ಹುದ್ದೆಗೆ ಏಳನೇ ತರಗತಿ ಉತ್ತಿರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಯೋಜನಾ ಅನುಷ್ಠಾನಾಧಿಕಾರಿಗಳು ಹುದ್ದೆಗಳನ್ನು ಅನುಭವ ಮತ್ತು ಕಾರ್ಯಕ್ಷಮತೆ ಆದಾರದ ಮೇಲೆ ಜಿಲ್ಲಾ ಆಯ್ಕೆ ಸಮಿತಿ ಒಪ್ಪಿದಲ್ಲಿ ಹಾಗೂ ಈ ಹುದ್ದೆಗಳ ಅನುಸಾರ ಆಸಕ್ತರು ಅರ್ಜಿಗಳನ್ನು ಫೆ.21 ರೊಳಗಾಗಿ ಕಚೇರಿ ಸಮಯದಲ್ಲಿ ದ್ವಿಪ್ರತಿ ಮುಚ್ಚಳಿಕೆ ಲಕೋಟೆಯಲ್ಲಿ ಕಚೇರಿ ವಿಳಾಸ:ಯೋಜನಾಧಿಕಾರಿಗಳು ದೇವದಾಸಿ ಪುನರ್ವಸತಿ ಯೋಜನೆ ಮನೆ ಸಂಖ್ಯೆ: 1-5-166 ಸ್ಟಾರ್ ಫನ್ಕ್ಷನ್ ಹಾಲ್ ಎದುರಗಡೆ ಬಾಲಜಿ ಕಾಂಪ್ಲೇಕ್ಸ್ ಹತ್ತಿರ ಗುಡ್‌ಶಡ್ ಏರಿಯಾ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ನಿರ್ವಾಹಕ ದೂರವಾಣಿ/ ಮೊಬೈಲ್ ಸಂಖ್ಯೆ: 9980879540ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂದಾಯ ಇಲಾಖೆಯ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಿ: ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಸೂಚನೆ

ನೈಜ್ಯ ದೆಸೆ ನ್ಯೂಸ್





**ರಾಯಚೂರು: ಕಂದಾಯ ಇಲಾಖೆಯಲ್ಲಿ ಅನೇಕ ಸುಧಾರಣೆಗಳನ್ನು ತರಲಾಗಿದ್ದು, ಇಲಾಖೆಯಲ್ಲಿನ ಸಾರ್ವಜನಿಕ ಸ್ನೇಹಿ ಎಲ್ಲ ಕಾರ್ಯಕ್ರಮಗಳ ಸರಿಯಾದ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಫೆ.11ರಂದು ನಡೆದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಂದಾಯ ಇಲಾಖೆಯಲ್ಲಿ ಮೊದಗಿಲಿಗಿಂತ ಅತೀ ಹೆಚ್ಚು ಬದಲಾವಣೆಯಾಗಿದೆ. ಮಹತ್ವದ ಎಲ್ಲ ಕಡತಗಳನ್ನು ಡಿಜಿಟಲ್ ವ್ಯವಸ್ಥೆಗೆ ಮಾರ್ಪಡಿಸಲಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರಿಗೆ ಪ್ರತಿಯೊಂದು ಮಾಹಿತಿಯು ಕ್ಷಣಾರ್ಧದಲ್ಲಿ ದೊರೆಯುವಂತಾಗಿದೆ. ಅದರಂತೆ ಕಂದಾಯ ಇಲಾಖೆಯ ಯೋಜನೆಗಳು, ಕಾರ್ಯಕ್ರಮಗಳ ಕುರಿತು ಮಾಹಿತಿಯನ್ನು ಕಂದಾಯ ಇಲಾಖೆಯ ಕಚೇರಿಗಳಲ್ಲಿ ಪ್ರದರ್ಶನ ಮಾಡಬೇಕು. ಮೃತರ ಹೆಸರಲ್ಲಿರುವ ಜಮೀನುಗಳನ್ನು ವಾರಸುದಾರರಿಗೆ ನೋಂದಣಿ ಮಾಡಿಕೊಡಲು ಕಂದಾಯ ಇಲಾಖೆಯಿಂದ ರೈತರ ಮನೆ ಬಾಗಿಲಿಗೇ ಇ-ಪೌತಿ ಆಂದೋಲನದಡಿ ಜಿಲ್ಲೆಯಲ್ಲಿ ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಬೇಕು.

ಈ ಬಗ್ಗೆ ಪ್ರತಿಯೊಂದು ಗ್ರಾಮಗಳಲ್ಲಿ ಮಾಹಿತಿ ನೀಡಿ ಜಾಗೃತಿ ಮೂಡಿಸಬೇಕು ಎಂದು ಅವರು ಸೂಚನೆ ನೀಡಿದರು. ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ದಾಖಲಾದ ಅರೆ ನ್ಯಾಯಿಕ ಪ್ರಕರಣಗಳನ್ನು ಬೇಗನೇ ಇತ್ಯರ್ಥಪಡಿಸಬೇಕು. ಕಂದಾಯ ದಾಖಲೆಗಳ ಡಿಜಿಟಲೀಕರಣಕ್ಕಾಗಿ ಜಿಲ್ಲೆಯಲ್ಲಿ ಈಗಾಗಲೇ ಲಕ್ಷಕ್ಕೂ ಹೆಚ್ಚು ಫೈಲುಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗಿದೆ. ಈ ಕಾರ್ಯ ಇನ್ನಷ್ಟು ವೇಗವಾಗಬೇಕು ಎಂದು ಅವರು ನಿರ್ದೇಶನ ನೀಡಿದರು.

ಆಯಾ ತಾಲೂಕುಗಳ ತಹಶೀಲ್ದಾರರು ಸಾರ್ವಜನಿಕರ ದಾಖಲೆಗಳನ್ನು ಸಂರಕ್ಷಿಸುವಲ್ಲಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣ ಮಾಡುವುದು ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು, ಇದರಿಂದ ಕುಳಿತಲ್ಲಿಯೇ ಬೆರಳ ತುದಿಯಲ್ಲಿ ಸಾರ್ವಜನಿಕರ ಆಕಾರ ಬಂದಿ, ಮ್ಯೂಟೇಷನ್, ಪಹಣಿ ಸೇರಿದಂತೆ ಎಲ್ಲವನ್ನೂ ಪಡೆಯಬಹುದಾಗಿದೆ. ಆದ್ದರಿಂದ ಜನರ ದಾಖಲೆಗಳ ಸಂರಕ್ಷಣೆಗೆ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು ಎಂದು ತಿಳಿಸಿದರು. ರೆಕಾರ್ಡ್ ರೂಮ್‌ಗಳ ನಿರ್ವಹಣೆ ಸರಿಯಾಗಿ ಇರಬೇಕು. ಅನುಪಯುಕ್ತ ಮತ್ತು ಅನಗತ್ಯ ವಸ್ತುಗಳನ್ನು ಬೇಗನೇ ವಿಲೇ ಮಾಡಬೇಕು. ದಾಖಲೆಗಳನ್ನು ಸರಿಯಾದ ರೀತಿಯಲ್ಲಿ ಹಾಗೂ ಸೂಕ್ಷ್ಮವಾಗಿ ನಿರ್ವಹಣೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ಅಧಿಕಾರಿ ಮೇಲಿದೆ.

ಯಾವ ಯಾವ ದಾಖಲೆಗಳಿಗೆ ಯಾವ ಯಾವ ಬಣ್ಣ ಬಳಸಬೇಕೆಂದು ಸರ್ಕಾರದಿಂದ ಇರುವ ಮಾರ್ಗಸೂಚಿ ಪಾಲನೆಯಾಗಬೇಕು ಎಂದು ಸೂಚನೆ ನೀಡಿದರು. ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು, ರಾಯಚೂರು ಜಿಲ್ಲೆಯ ಕಂದಾಯ ಇಲಾಖೆಯ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾದ ಅರೇ ನ್ಯಾಯಿಕ ಪ್ರಕರಣಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣೆಪ್ಪ ಕಲಶೆಟ್ಟಿ, ಜಿಲ್ಲಾಧಿಕಾರಿ ಕಚೇರಿಯ ತಹಶೀಲ್ದಾರ್ ಜಗದೀಶ್, ಜಿಲ್ಲೆಯ ವಿವಿಧ ತಾಲೂಕು ತಹಶೀಲ್ದಾರರು, ಶಿರಸ್ತೇದಾರರು, ಉಪ ತಹಶೀಲ್ದಾರರು ಸೇರಿದಂತೆ ಹಾಗೂ ಕಂದಾಯ ಮತ್ತು ಭೂಮಾಪನಾ ಇಲಾಖೆಯ ಅಧಿಕಾರಿಗಳು ಇದ್ದರು.

# ಹಳ್ಳಿ ಸೊಗಡು ಕಾರ್ಯಕ್ರಮ ಪೂಜ್ಯರಿಂದ ಉದ್ಘಾಟನೆ





ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಫೆ 11 ಸ್ಥಳೀಯ ಶ್ರೀ ಮರಿ ಬಸವಲಿಂಗೇಶ್ವರ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಫೆಬ್ರವರಿ 11ರಂದು ನಮ್ಮ ದೇಶದ ಭವ್ಯ ಪರಂಪರೆಯನ್ನು ಬಿಂಬಿಸುವ 'ಹಳ್ಳಿ ಸೊಗಡು' ಮತ್ತು ಸಂಸ್ಕಾರಯುತ 'ತಾಯಂದಿರ ಪಾದಪೂಜೆ' ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಶಾಲೆಯ ಕಾರ್ಯಾಧ್ಯಕ್ಷರಾದ ಶ್ರೀ ಶ್ರೀ ಸಿದ್ದಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡುತ್ತಾ, "ತಾಯಿಯೇ ಮೊದಲ ಗುರು. ಮಕ್ಕಳಲ್ಲಿ ಬಾಲ್ಯದಿಂದಲೇ ತಂದೆ-ತಾಯಿಯರ ಬಗ್ಗೆ ಗೌರವ ಮತ್ತು ಭಕ್ತಿ ಮೂಡಿಸುವುದು ಇಂದಿನ ಅಗತ್ಯವಾಗಿದೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಸುಸಂಸ್ಕೃತ ಗುಣಗಳನ್ನು ಬೆಳೆಸುತ್ತವೆ" ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ರಾಷ್ಟ್ರಮಟ್ಟದ ಖೋ ಖೋ ಕ್ರೀಡೆಯಲ್ಲಿ 'ಅತ್ಯುತ್ತಮ ಆಲ್ ರೌಂಡರ್' ಆಗಿ ಮಿಂಚಿ, ನಮ್ಮ ಊರು, ಜಿಲ್ಲೆ ಹಾಗೂ ವಿಭಾಗಕ್ಕೆ ಕೀರ್ತಿ ತಂದ ಸಾಧಕ ಮೌನೇಶ್ ನಾಯಕ್ ಅವರನ್ನು ಶಾಲಾ ಪೂಜ್ಯರು ಹಾಗೂ ಆಡಳಿತ ಮಂಡಳಿಯ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಶಾಲಾ ಆಡಳಿತ ಮಂಡಳಿಯ ಪದಾಧಿಕಾರಿಗಳು, ಗುರುಗಳು ಹಾಗೂ ಶಾಲಾ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು. ಶಾಲಾ ಆವರಣದಲ್ಲಿ ಗ್ರಾಮೀಣ ಸಂಸ್ಕೃತಿಯ ಅನಾವರಣವು ಎಲ್ಲರ ಗಮನ ಸೆಳೆಯಿತು.

# ಇಂದು 12ರಿಂದ ತರಹೇವಾರಿ ಹಣ್ಣುಗಳ ಮೇಳ

ನೈಜ್ಯ ದೆಸೆ ನ್ಯೂಸ್



**ರೈತರಿಂದ ನೇರವಾಗಿ ಖರೀದಿಸಿ ಗ್ರಾಹಕರಿಗೆ ಒದಗಿಸಲು ತೋಟಗಾರಿಕಾ ಇಲಾಖೆಯು ಶಿವರಾತ್ರಿ ಅಂಗವಾಗಿ ಫೆ. 12ರಿಂದ 16ರ ತನಕ ಇಲ್ಲಿನ ಇಲಾಖೆಯ ಕಚೇರಿಯ ಆವರಣದಲ್ಲಿ ತರಹೇವಾರಿ ಹಣ್ಣುಗಳ ಮೇಳ ಹಮ್ಮಿಕೊಂಡಿದೆ. ದ್ರಾಕ್ಷಿ, ದಾಳಿಂಬೆ, ಪೇರಲ, ಅಂಜೂರ, ಕಲ್ಲಂಗಡಿ, ಕರಬೂಜ, ಬಾಳೆ, ಪಪ್ಪಾಯ, ಹಲಸು, ಜೇನು ಹಾಗೂ ಅಣಬೆ ಪ್ರದರ್ಶನ ಮತ್ತು ಮಾರಾಟ ಮೇಳ ಜರುಗಲಿದೆ.ಮೇಳವನ್ನು ಜಿಲ್ಲಾ ಉಸ್ತುವಾರಿ ಸಚಿವ ತಂಗಡಗಿ ತಂಗಡಗಿ ಉದ್ಘಾಟಿಸವರು.**

ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಪಾಲ್ಗೊಳ್ಳುವರು. ಕಾರ್ಯಾಗಾರ: ಮೇಳದಲ್ಲಿ ಜೇನು ಸಾಕಾಣಿಕೆ ಕುರಿತು ತಾಂತ್ರಿಕ ಕಾರ್ಯಾಗಾರ ಆಯೋಜಿಸಲಾಗಿದ್ದು, ಪಾರಂಪರಿಕ ವೈದ್ಯರು ಹಾಗೂ ಜೇನು ಕೃಷಿ ತಜ್ಞರಾದ ಮಧುಕೇಶ್ವರ ಜಿ.ಹೆಗಡೆ ಕಾರ್ಯಾಗಾರ ನಡೆಸಿಕೊಡುವರು. ಕೊಪ್ಪಳದ ಅಭಿನವಶ್ರೀ ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆ, ಕನಕಗಿರಿಯ ರೈತ ಜೀವ ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆ, ಕುಷ್ಟಗಿಯ ಕಪಿಲತೀರ್ಥ ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆ, ತಾವರಗೇರಿಯ ಅಮೃತವರ್ಷಿಣಿ ರೈತ ಉತ್ಪಾದಕರ ಸಂಸ್ಥೆ, ಬೇವೂರಿನ ಯಲಬುರ್ಗಾ ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆ, ಕುಕನೂರಿನ ಗಂಧ ತೋಟಗಾರಿಕೆ ರೈತ ಉತ್ಪಾದಕರ ಸಂಸ್ಥೆ ಹೀಗೆ ಅನೇಕ ಸಂಸ್ಥೆಗಳು ಪಾಲ್ಗೊಳ್ಳಲಿವೆ ಎಂದು ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣ ಸಿ.ಉಕ್ಕುಂದ ತಿಳಿಸಿದ್ದಾರೆ.

# ಕಾಯಕದಿಂದ ಬದುಕು ರೂಪಿಸಿದ ಶರಣರು: ತಹಶೀಲ್ದಾರ್ ಸುರೇಶ ವರ್ಮಾ

ನೈಜ್ಯ ದೆಸೆ ನ್ಯೂಸ್



**ಹನ್ನೆರಡನೆಯ ಶತಮಾನದ ಶರಣರು ಕಾಯಕದ ಜೊತೆಗೆ ಬದುಕು ರೂಪಿಸಿಕೊಳ್ಳುವ ಕಲೆಯನ್ನು ಹೇಳಿಕೊಟ್ಟಿದ್ದಾರೆ. ಶರಣರ ಮಾರ್ಗದಲ್ಲಿ ಸಾಗುವ ಮೂಲಕ ಪ್ರತಿಯೊಬ್ಬರೂ ಸುಂದರ ಬದುಕು ರೂಪಿಸಿಕೊಳ್ಳಬೇಕಿದೆ' ಎಂದು ತಹಶೀಲ್ದಾರ್ ಸುರೇಶ ವರ್ಮಾ ಹೇಳಿದರು.ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಿದ್ದ ಕಾಯಕ ಶರಣರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.**

ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಉರಿಲಿಂಗಪೆದ್ದಿ, ಡೋಹರ ಕಕ್ಕಯ್ಯ ಹಾಗೂ ಸಮಗಾರ ಹರಳಯ್ಯ ಅವರು ಕಾಯಕದ ಜೊತೆಗೆ ಆಧ್ಯಾತ್ಮಿಕ ಚಿಂತನೆಗಳ ಮೂಲಕ ಸಮಾಜವನ್ನು ತಿದ್ದುತ್ತಿದ್ದರು. ಮೌಢ್ಯತೆ ತೊಲಗಿಸಿ ಸಮಾಜ ಸಮಾನತೆಯತ್ತ ಕೊಂಡೊಯ್ಯುವುದು ಶರಣರ ಗುರಿಯಾಗಿತ್ತು. ಸಮ ಸಮಾಜ ನಿರ್ಮಾಣ ಅವರ ಧ್ಯೇಯವಾಗಿತ್ತು. ಆದರೆ, ಇಂದು ಮೋಸ, ವಂಚನೆಗಳು ಹೆಚ್ಚಾಗುತ್ತಿವೆ' ಎಂದು ವಿಷಾದ ವ್ಯಕ್ತಪಡಿಸಿದರು. ಕಂದಾಯ ಇಲಾಖೆಯ ಆಡಳಿತ ವಿಭಾಗದ ಉಪ ಆಯುಕ್ತ ಬಿ.ಶರಣಪ್ಪ ಸತ್ಯಂಪೇಟೆ,'ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಉರಿಲಿಂಗಪೆದ್ದಿ, ಡೋಹರ ಕಕ್ಕಯ್ಯ ಹಾಗೂ ಸಮಗಾರ ಹರಳಯ್ಯ ಅವರು ಶರಣರಲ್ಲೇ ಪ್ರಮುಖರಾಗಿದ್ದಾರೆ.

770 ಅಮರಂಗಳಲ್ಲಿ ಈ ಐವರು ಮೊದಲಿಗರಾಗಿದ್ದಾರೆ. ಮೊದಲ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ನೀಡಿದ ಶರಣ ಸಾಲಿನಲ್ಲಿ ಐವರು ಕಾಯಕ ಶರಣರು ಹೆಸರು ಇಂದಿಗೂ ಮುಂಚೂಣಿಯಲ್ಲಿದೆ' ಎಂದು ಬಣ್ಣಿಸಿದರು. ಪ್ರಮುಖರಾದ ಚನ್ನಪ್ಪಗೌಡ ಪಾಟೀಲ, ಭೀಮರಾಜ, ಎಸ್.ರಾಜು, ಜಿ.ವೇಣುಗೋಪಾಲ, ಯಮುನಪ್ಪ, ಹನುಮಂತಪ್ಪ, ಈರಣ್ಣ ಬೆಂಗಾಲಿ ಉಪಸ್ಥಿತರಿದ್ದರು. ಇದಕ್ಕೂ ಮೊದಲು ನಗರದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ರಂಗ ಮಂದಿರದವರೆಗೆ ಶರಣರ ಭಾವಚಿತ್ರದ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಅಧಿಕಾರಿಗಳು ಹಾಗೂ ವಿವಿಧ ಸಮಾಜಗಳ ಮುಖಂಡರು ಪಾಲ್ಗೊಂಡಿದ್ದರು.

# ಸಂತಕವಿ ಸರ್ವಜ್ಞ ಜಯಂತಿ ಅರ್ಥಪೂರ್ಣ ಆಚರಣೆಗೆ ಸೂಚನೆ

ನೈಜ್ಯ ದೆಸೆ ನ್ಯೂಸ್



**ರಾಯಚೂರು: ತ್ರಿಪದಿ ಕವಿ ಎಂದೇ ಪ್ರಸಿದ್ದಿಯಾದ ಸಂತ ಕವಿ ಸರ್ವಜ್ಞ ಅವರ ಜಯಂತಿಯನ್ನು ಜಿಲ್ಲಾಡಳಿದಿಂದ ಫೆ.20ರಂದು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ ಅವರು ಹೇಳಿದರು.**

ಫೆ.11ರ ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಂತ ಕವಿ ಸರ್ವಜ್ಞ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಎಲ್ಲ ಸರ್ಕಾರಿ ಕಚೇರಿಗಳು, ಗ್ರಾಮ ಪಂಚಾಯಿತಿಗಳಲ್ಲಿ, ಶಾಲಾ-ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ ಸಂತ ಕವಿ ಸರ್ವಜ್ಞ ಜಯಂತಿಯನ್ನು ಕಡ್ಡಾಯವಾಗಿ ಆಚರಣೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ನಾನಾ ಕಾರ್ಯಸಿದ್ಧತೆಗೆ ಅಗತ್ಯ ಕ್ರಮ ವಹಿಸಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂದು ಜಿಲ್ಲಾ ಕೇಂದ್ರದಲ್ಲಿ ಬೆಳಿಗ್ಗೆ 09 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮೆರವಣಿಗೆ ಸಾಗುವ ಮಾರ್ಗ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆಯನ್ನು ಮಹಾನಗರ ಪಾಲಿಕೆಯಿಂದ ಕಲ್ಪಿಸಬೇಕು ಎಂದರು. ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು-ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು.

ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು ಎಂದು ಸಮಾಜದ ಮುಖಂಡರಲ್ಲಿ ಕೋರಿದರು. ವೇದಿಕೆ ಕಾರ್ಯಕ್ರಮದಲ್ಲಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸುವಂತೆ ಸಮಾಜದ ಮುಖಂಡರು ಮನವಿ ಮಾಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ಸಂತ ಕವಿ ಸರ್ವಜ್ಞ ಅವರ ಕುರಿತು ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಗಳಿಗೆ ಗುರುತಿಸಿ ಆಹ್ವಾನ ನೀಡಬೇಕು ಎಂದು ಮುಖಂಡರಾದ ವೀರಭದ್ರಪ್ಪ, ವೈ.ಸುರೇಂದ್ರ ಬಾಬು, ಶ್ರೀಸಾಯಿಬಾಬು, ಕೆ.ಗೋವಿಂದ್ ಇತರರು ಮನವಿ ಮಾಡಿದರು. ಸಭೆಯಲ್ಲಿ ಸಮಾಜದ ಮುಖಂಡರಾದ ಪ್ರವೀಣ್ ಕುಮಾರ್, ನಿಂಗಪ್ಪ, ಶಶಿಕುಮಾರ್, ಕುರುಮೂರ್ತಿ, ಶಿವರಾಜಪ್ಪ, ವ.ಆಂಜಿನೇಯ್ಯ, ತಿಮ್ಮಪ್ಪ, ಲಕ್ಷ್ಮೀ ರೆಡ್ಡಿ, ಹನುಮಂತ ರೆಡ್ಡಿ ಮಲ್ಲಪೂರು, ರಾಕೇಶ್ ಕುಮಾರ್ ಸೇರಿದಂತೆ ಇನ್ನೀತರ ಮುಖಂಡರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.